ಕನ್ನಡಪ್ರಭ
ಸೋಮವಾರ 4.05.2026

ಗರಿಷ್ಠ 38°C ಕನಿಷ್ಠ 24°C

ಸುದ್ದಿ ಸಿಂಚನ

ಕಾರ್ಮಿಕರ ಕೊಡುಗೆ ಅಪಾರ

ಯಲಬುರ್ಗಾ: ತಾಲೂಕಿನ ಹಿರೇವಂಕಲಕುಂಟಾ ಗ್ರಾಪಂ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಆರಂಭವಾದ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ವಿಶ್ವ ಕಾರ್ಮಿಕರ ದಿನ ಆಚರಿಸಲಾಯಿತು. ತಾಪಂ ಐಇಸಿ ಸಂಯೋಜಕ ಶರಣಪ್ಪ ಹಾಳಕೇರಿ ಮಾತನಾಡಿ, ದೇಶದ ಅಭಿವೃದ್ಧಿಯಲ್ಲಿ ಕಾರ್ಮಿಕರ ಕೊಡುಗೆ ಅಪಾರವಿದೆ. ಕಾರ್ಮಿಕರು ಇಲ್ಲದ ದೇಶ ಊಹಿಸಲು ಸಾಧ್ಯವಿಲ್ಲ.ಕಾರ್ಮಿಕರಿಗಾಗಿಯೇ ಜಗತ್ತಿನಾದ್ಯಂತ ಈ ದಿನ ಆಚರಿಸಲಾಗುತ್ತಿದೆ ಎಂದರು. ನರೇಗಾ ಯೋಜನೆಯಡಿ ಕೈಗೊಳ್ಳುವ ಸಾಮೂಹಿಕ ಕಾಮಗಾರಿಗಳಿಗೆ ಎನ್‌ಎಂಎಂಎಸ್ ಹಾಜರಾತಿ ಮೂಲಕ ವೈಯಕ್ತಿಕ ಫೋಟೋ ತೆಗೆದುಕೊಳ್ಳಲಾಗುತ್ತಿದೆ. ಕೆಲಸಕ್ಕೆ ಬರುವ ಪ್ರತಿಯೊಬ್ಬರೂ ಫೋಟೋ ತೆಗೆಸಿಕೊಂಡಲ್ಲಿ ವೇತನ ಸಮಸ್ಯೆ ಬರುವುದಿಲ್ಲ.ಹೀಗಾಗಿ ಎಲ್ಲರೂ ಕಡ್ಡಾಯವಾಗಿ ಫೋಟೋ ತೆಗೆಸಿಕೊಂಡು ಕೆಲಸ ಮಾಡಬೇಕೆಂದು ತಿಳಿಸಿದರು. ಕೂಲಿಕಾರರು ಗುಳೆ ಹೋಗುವುದನ್ನು ತಡೆಗಟ್ಟಿ ತಮ್ಮ ತಮ್ಮ ಹಳ್ಳಿಯಲ್ಲಿಯೇ ಕೆಲಸ ಕೊಡಲಾಗುತ್ತಿದೆ.ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳಬೇಕು. ಈಗ ಬೇಸಿಗೆ ಇರುವುದರಿಂದ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು.ನೀರು ಸರಿಯಾಗಿ ಕುಡಿಯಬೇಕು.ಆರೋಗ್ಯ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು. ಯೋಜನೆಯಲ್ಲಿ ಆದ ಹೊಸ ಬದಲಾವಣೆ ಹಾಗೂ ಹಾಜರಾತಿ ಕುರಿತು ಮಾಹಿತಿ ತಿಳಿಸಿದರು. ಇದೇ ವೇಳೆ ಕಾರ್ಮಿಕ ದಿನಾಚರಣೆಯನ್ನು ಕೂಲಿಕಾರರಿಂದ ಕೇಕ್ ಕತ್ತರಿಸಿ ಸಿಹಿ ಹಂಚಲಾಯಿತು. ಗ್ರಾಮ ಕಾಯಕ ಮಿತ್ರರಾದ ಮಂಜುಳಾ ವಾಲ್ಮಿಕಿ, ಕಾಯಕ ಬಂಧುಗಳು, ಕೂಲಿಕಾರರು ಹಾಜರಿದ್ದರು.

ಕಠಿಣ ಪರಿಶ್ರಮದಿಂದ ಯಶಸ್ಸು ಸಾಧ್ಯ



ಕುಕನೂರು: ಕಠಿಣ ಪರಿಶ್ರಮದಿಂದ ವಿದ್ಯಾರ್ಥಿಗಳಿಗೆ ಯಶಸ್ಸು ಸಾಧ್ಯ ಎಂದು ನಿವೃತ್ತ ಡಿಡಿಪಿಐ ಎನ್ .ಡಿ.ಸಾಲಿ ಹೇಳಿದರು. ಪಟ್ಟಣದ ಶ್ರೀಅನ್ನದಾನೇಶ್ವರ ಶಾಖಾಮಠದಲ್ಲಿ ಶ್ರೀಮಠ ಹಾಗೂ ಕನ್ನಡ ಸಾಹಿತ್ಯ ಸಂಸ್ಕೃತಿ ಮತ್ತು ಅಭಿವೃದ್ಧಿ ಟ್ರಸ್ಟ್ ಸಹಯೋಗದಲ್ಲಿ ಭಾನುವಾರ ತಾಲೂಕಿನಲ್ಲಿ ಪಿಯುಸಿ, ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ.75 ಅಂಕ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಜರುಗಿದ ಪ್ರತಿಭಾ ಪುರಸ್ಕಾರ ಕಾಯ9ಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಶೈಕ್ಷಣಿಕ ಸೌಲಭ್ಯಗಳಿಂದ ಉಜ್ವಲ ಭವಿಷ್ಯ ನಿಮಿ9ಸಿಕೊಳ್ಳಬೇಕು. ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ಸರ್ಕಾರ ಸಾಕಷ್ಟು ಯೋಜನೆ ಜಾರಿಗೆ ತಂದಿದೆ, ಅವುಗಳ ಸದುಪಯೋಗ ಪಡೆದು ಉನ್ನತ ಸ್ಥಾನಕ್ಕೆ ಬೆಳೆಯಲು ಪ್ರಯತ್ನಿಸಬೇಕು. ಸರ್ಕಾರವು ಇಂದಿನ ದಿನಗಳಲ್ಲಿ ವಸತಿ ನಿಲಯಗಳು ಸೇರಿದಂತೆ ಸಾಕಷ್ಟು ಪ್ರಮಾಣದಲ್ಲಿ ಶೈಕ್ಷಣಿಕ ಸೌಲಭ್ಯ ಒದಗಿಸಲು ಪ್ರಯತ್ನಿಸುತ್ತಿವೆ ಇವುಗಳನ್ನು ಬಳಸಿ ಪಿಯುಸಿ ಹಾಗೂ ಪದವಿ ಇನ್ನಿತರ ತಾಂತ್ರಿಕ ಶಿಕ್ಷಣದಲ್ಲಿ ಪ್ರವೇಶ ಪಡೆದು ಆದಶ9 ವಿದ್ಯಾರ್ಥಿಗಳಾಗಿ ಜಿಲ್ಲೆಗೆ ಹೆಸರು ತರಬೇಕು ಎಂದರು. ವಕೀಲ ಬಸವರಾಜ ಜಂಗ್ಲಿ ಮಾತನಾಡಿ, ವಿದ್ಯಾರ್ಥಿಗಳು ಮೊಬೈಲ್ ದಾಸರಾಗದೆ ಪುಸ್ತಕಗಳ ದಾಸರಾಗಿ ಉತ್ತಮ ವ್ಯಕ್ತಿತ್ವದಿಂದ ಸಮಾಜಕ್ಕೆ ಉತ್ತಮ ಕೊಡುಗೆ ನೀಡಲು ಮುಂದಾಗಬೇಕೆಂದರು. ನಿವೃತ್ತ ಶಿಕ್ಷಕ ಶರಣಪ್ಪ ಕೊಪ್ಪದ ಅಧ್ಯಕ್ಷತೆ ವಹಿಸಿದ್ದರು. ಸ್ಥಳೀಯ ಮಠದ ಶ್ರೀಮಹಾದೇವ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಸಿ.ಆರ್.ಪಿ ಪೀರಸಾಬ್ ದಫೇದಾರ, ಪತ್ರಕರ್ತ ಮುರಾರಿ ಭಜಂತ್ರಿ,ವಕೀಲ ರಮೇಶ ಗಜಕೋಶ, ಪಪಂ ಸದಸ್ಯ ಪ್ರಶಾಂತ ಆರಬೇರಳಿನ್, ಸಂಸ್ಥೆಯ ಅಧ್ಯಕ್ಷ ರುದ್ರಪ್ಪ ಭಂಡಾರಿ ಇತರರಿದ್ದರು. ವಿದ್ಯಾರ್ಥಿ ನೀಲಮ್ಮ ಶಿರೂರಮಠ,ಗಾಯಕ ಶರಭಯ್ಯ ಶಿರೂರು ಮಠ ಭಕ್ತಿಗೀತೆ, ಜಾನಪದ ಗೀತೆ ಪ್ರಸ್ತುತಪಡಿಸಿದರು. 45 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸತ್ಕರಿಸಿ ಗೌರವಿಸಲಾಯಿತು. ಪತ್ರಕರ್ತ ಕನಕರಾಯ ಭಜಂತ್ರಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪತ್ರಕರ್ತ ಬಸವರಾಜ ಕೊಡ್ಲಿ ಸ್ವಾಗತಿಸಿದರು.



ಯಲಬುರ್ಗಾ ತಾಲೂಕಿನ ಹಿರೇವಂಕಲಕುಂಟಾ ಗ್ರಾಪಂ ವ್ಯಾಪ್ತಿಯಲ್ಲಿ ನರೇಗಾದಡಿ ಆರಂಭವಾದ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ವಿಶ್ವ ಕಾರ್ಮಿಕ ದಿನ ಆಚರಿಸಲಾಯಿತು. ಈ ತಾಪಂ ಐಇಸಿ ಸಂಯೋಜಕ ಶರಣಪ್ಪ ಹಾಳಕೇರಿ ಮತ್ತಿತರರು ಇದ್ದರು.



ಗಂಗಾವತಿ ನಗರದ ಕೊಟ್ಟೂರು ಬಸವೇಶ್ವರ ದೇವಸ್ಥಾನದ ಆವರಣದ ವೇದಿಕೆಯಲ್ಲಿ ಮಾಜಿ ಶಾಸಕ ಪರಣ್ಣ ಮುನವಳ್ಳಿ ಜನ್ಮ ದಿನಾಚರಣೆ ಹಿನ್ನೆಲೆ ಖಾಜಾಬಿ ಅಲ್ಲಾಸಾಬ್ ಮತ್ತು ಭರಮಪ್ಪ ಕುಂಬಾರಗೆ ಕಾಯಕಶೀಲ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಖಾಜಾಬಿ, ಭರಮಪ್ಪಗೆ ಕಾಯಕಶೀಲ ಪ್ರಶಸ್ತಿ

• **ಕನ್ನಡಪ್ರಭ ವಾರ್ತೆ** ಗಂಗಾವತಿ

ನಗರದ ಕೊಟ್ಟೂರು ಬಸವೇಶ್ವರ ದೇವಸ್ಥಾನದ ಆವರಣದ ವೇದಿಕೆಯಲ್ಲಿ ಖಾಜಾಬಿ ಅಲ್ಲಾಸಾಬ್ ಮತ್ತು ಭರಮಪ್ಪ ಕುಂಬಾರಗೆ ಕಾಯಕಶೀಲ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮಾಜಿ ಶಾಸಕ ಪರಣ್ಣ ಮುನವಳ್ಳಿ ಜನ್ಮ ದಿನಾಚರಣೆ ಸಂದರ್ಭದಲ್ಲಿ ಇಬ್ಬರು ಸಾಧಕರಿಗೆ ಪ್ರಶಸ್ತಿ ಮತ್ತು ₹2500 ನಗದು, ಫಲ, ಪುಷ್ಪ ನೀಡಿ ಗೌರವಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ಅಭಾಶ ರಾಜ್ಯ ಉಪಾಧ್ಯಕ್ಷ ಅಪ್ಪರಾವ್ ಅಕ್ಕೋನಿ ಮಾತನಾಡಿ, ಮಾಜಿ ಶಾಸಕ ಪರಣ್ಣಮುನವಳ್ಳಿಪ್ರತಿವರ್ಷ ಜನ್ಮದಿನಾಚರಣೆಯನ್ನು ಆಡಂಬರವಾಗಿ ಆಚರಿಸದೇ ಇಬ್ಬರು ಸಾಧಕರಿಗೆ ಕಾಯಕಶೀಲ ಪ್ರಶಸ್ತಿ ನೀಡುತ್ತಿರುವದು ಪ್ರಶಂಸನೀಯವಾಗಿದೆ. ಇದಕ್ಕಾಗಿ ₹2 ಲಕ್ಷ ದತ್ತಿ ನಿದಿ ಮೀಸಲಿಟ್ಟಿದ್ದಾರೆ. ಪ್ರತಿ ವರ್ಷ ಇಂತಹ ಕಾರ್ಯ ಸಂಘಟಕರು ಮಾಡುತ್ತಾ ಬಂದಿದ್ದಾರೆ ಎಂದರು. ಮಾಜಿ ಶಾಸಕ ಪರಣ್ಣ ಮುನವಳ್ಳಿ ಮಾತನಾಡಿದರು.

ಈ ವೇಳೆ ಮಾಜಿ ಸಂಸದ ಶಿವರಾಮಗೌಡ ಸೇರಿದಂತೆ ಪ್ರಮುಖರು ಭಾಗವಹಿಸಿದ್ದರು. ಮಾಲಾಶ್ರೀ ಪ್ರಾರ್ಥಿಸಿದರು, ಶಿವಕುಮಾರ ಕುಕನೂರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಗವಿಸಿದ್ಧೇಶ್ವರ ಗುರುಕುಲ ಲೋಕಾರ್ಪಣೆ

ವಿದ್ಯಾರ್ಥಿನಿಯರಿಗಾಗಿ ಉಚಿತ ವಸತಿ ಕಾಲೇಜು ಉದ್ಘಾಟನೆ | ಕೊಪ್ಪಳ ವಿದ್ಯಾಕಾಶಿಯಾಗಲಿದೆ: ಬಸವರಾಜ ಬೊಮ್ಮಾಯಿ

ವಿದ್ಯಾರ್ಥಿಗಳ ವಸತಿ ಕಾಲೇಜು ಪ್ರಾರಂಭದ ಶ್ರೇಯಸ್ಸು ಕಾಣದ ಕೊಡುಗೈ ದಾನಿಗಳಿಗೆ: ಶ್ರೀ ಗವಿಸಿದ್ಧೇಶ್ವರ ಮಹಾಸ್ವಾಮೀಜಿ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಗವಿಸಿದ್ಧೇಶ್ವರ ಮಹಾಸ್ವಾಮೀಜಿಗಳ ಕನಸಿನ ಕೂಸು, ಕೊಪ್ಪಳದಿಂದ 11 ಕಿಮೀ ದೂರದಲ್ಲಿರುವ ವಿದ್ಯಾರ್ಥಿನಿಯರ ಉಚಿತ ವಸತಿ ಕಾಲೇಜು 'ಶ್ರೀ ಗವಿಸಿದ್ಧೇಶ್ವರ ಗುರುಕುಲ' ಆರಂಭವಾಗಿದೆ. ಗ್ರಾಮೀಣಪ್ರದೇಶದಬಡವಿದ್ಯಾರ್ಥಿನಿಯರಿಗಾಗಿ ಉಚಿತ ವಸತಿಸಹಿತ ಪಿಯು ಹೈಟೆಕ್ ಕಾಲೇಜನ್ನು ಮಠಾಧೀಶರು ಮತ್ತು ಜನಪ್ರತಿನಿಧಿಗಳ ಸಮ್ಮುಖದಲ್ಲಿ ಭಾನುವಾರ ಲೋಕಾರ್ಪಣೆ ಮಾಡಲಾಯಿತು.

ವೀರಶೈವಲಿಂಗಾಯತಮಠಗಳಲ್ಲಿಇದುವರೆಗೂ ವಿದ್ಯಾರ್ಥಿಗಳಿಗಾಗಿ ಪ್ರಸಾದ ನಿಲಯ ದೊಡ್ಡ ಸಂಖ್ಯೆಯಲ್ಲಿ ಇವೆ. ಆದರೆ ಮಹಿಳೆಯರ ಶಿಕ್ಷಣಕ್ಕಾಗಿ ವಸತಿಸಹಿತ ಪಿಯು ಕಾಲೇಜು ಪ್ರಾರಂಭಿಸಿದ್ದು ಇದೇ ಮೊದಲು ಎಂದು ಗಣ್ಯರು ಅಭಿಪ್ರಾಯ ವ್ಯಕ್ತಪಡಿಸಿದರು.

ಸುಮಾರು 48 ಎಕರೆ ವಿಸ್ತಾರವಾದ ಕ್ಯಾಂಪಸ್‌ನಲ್ಲಿ ₹60 ಕೋಟಿ ವೆಚ್ಚದಲ್ಲಿ ತಲೆ ಎತ್ತಿರುವ ಹೈಟೆಕ್ ವಸತಿ ಕಾಲೇಜು ಯಾವುದೇ ಖಾಸಗಿ ಶಿಕ್ಷಣ ಸಂಸ್ಥೆಗಳಿಗಿಂತಲೂ ಕಡಿಮೆ ಇಲ್ಲ ಎನ್ನುವಂತಿದೆ.

ವಿದ್ಯಾರ್ಥಿನಿಯರಿಗೆ ಇಲ್ಲಿ ಪಿಯು ವಿಜ್ಞಾನ, ಕಲಾ ವಿಭಾಗ ಇದ್ದು, ಜತೆಗೆ ಸಿಇಟಿ, ನೀಟ್, ಜೆಇಇ ಸೇರಿದಂತೆ ಹಲವಾರು ವೃತ್ತಿ ತರಬೇತಿ ಕೋರ್ಸ್ ಉಚಿತಕೋಚಿಂಗ್‌ಸಹಲಭ್ಯವಿರುತ್ತದೆ. ಕಾಲೇಜು, ತರಬೇತಿ ಮತ್ತು ವಸತಿ ಸಂಪೂರ್ಣ ಉಚಿತವಾಗಿರುತ್ತದೆ. ಆದರೆ, ವಿದ್ಯಾರ್ಥಿನಿಯರು ಊಟದ ವೆಚ್ಚ ಭರಿಸಬೇಕಾಗುತ್ತದೆ.

ವಿದ್ಯಾಕಾಶಿಯಾಗಲಿ: ಸಂಸದ ಬಸವರಾಜ ಬೊಮ್ಮಾಯಿ ಗುರುಕುಲ ಲೋಕಾರ್ಪಣೆ ಮಾಡಿ ಮಾತನಾಡಿ, ಗವಿಸಿದ್ಧೇಶ್ವರ ಮಹಾಸ್ವಾಮೀಜಿಗಳು ಕೈಗೊಳ್ಳುತ್ತಿರುವ ಶೈಕ್ಷಣಿಕ ಕ್ರಾಂತಿಯಿಂದ ಕೊಪ್ಪಳ ವಿದ್ಯಾಕಾಶಿಯಾಗಲಿದೆ ಎಂದು ಹೇಳಿದರು.



ಶ್ರೀ ಗವಿಸಿದ್ಧೇಶ್ವರ ಗುರುಕುಲ ಉದ್ಘಾಟನಾ ಸಮಾರಂಭದಲ್ಲಿ ಶ್ರೀ ಗವಿಸಿದ್ಧೇಶ್ವರ ಸ್ವಾಮೀಜಿಗಳು ಮಾತನಾಡಿದರು.

ಗವಿಸಿದ್ಧೇಶ್ವರ ಮಹಾಸ್ವಾಮೀಜಿ ಸತತ ಸಮಾಜಮುಖಿ ಕಾರ್ಯದಲ್ಲಿ ತೊಡಗಿದ್ದು, ಕೋವಿಡ್ ಸಮಯದಲ್ಲಿ ಅವರ ಸೇವೆ ಅನನ್ಯ ಎಂದರು.

ವಿದ್ಯಾರ್ಥಿಗಳು ಅಪಾರ ಸಂಖ್ಯೆಯಲ್ಲಿ ಆಶ್ರಯ ಕೋರಿ ಬರುತ್ತಾರೆ. ಆದರೆ, ಅವರಿಗೆ ಅನ್ನ ನೀಡಬಹುದಾದರೂ ಆಶ್ರಯ ನೀಡುವುದು ಕಷ್ಟವಾಗುತ್ತದೆ ಎಂದು ದುಃಖ ವ್ಯಕ್ತಪಡಿಸಿದ್ದರು. ಅದನ್ನು ನೋಡಿದ ನಾನು ತಡಮಾಡದೆ ಸರ್ಕಾರದಿಂದ ಅಲ್ಪಪ್ರಮಾಣದ ನೆರವು ನೀಡಿದ್ದೆ. ಆದರೆ, ಇಷ್ಟು ದೊಡ್ಡ ಪ್ರಮಾಣದ ಶಿಕ್ಷಣ ಸಂಸ್ಥೆಯೊಂದು ಮಹಿಳೆಯರಿಗಾಗಿ ತಲೆ ಎತ್ತಲಿದೆ ಎಂದು ನಾನು ಅಂದುಕೊಂಡಿರಲಿಲ್ಲ. ಅವರ ಶುದ್ಧ ಮನಸ್ಸಿನ ಸೇವೆಗಾಗಿ ಅಪಾರ ಪ್ರಮಾಣದ ನೆರವು ಹರಿದುಬರುತ್ತಿದೆ. ಅದರಲ್ಲೂ ಈಗ ಅವರು ಮಹಿಳೆಯರಿಗಾಗಿ ವಸತಿ ಪಿಯು ಕಾಲೇಜು ತೆರೆದಿರುವುದು ನಿಜಕ್ಕೂ ಶ್ಲಾಘನೀಯ ಎಂದರು.

ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಮಾತನಾಡಿ, ಕೊಪ್ಪಳದಂತಹ ಪ್ರದೇಶದಲ್ಲಿ ಮಹಿಳೆಯರಿಗಾಗಿ ಹೈಟೆಕ್ ಉಚಿತ ಪಿಯು ಕಾಲೇಜು ತೆರೆದಿರುವುದು ನಿಜಕ್ಕೂ ಶ್ಲಾಘನೀಯ ಎಂದರು. ವೀರಶೈವ ಲಿಂಗಾಯತ ಶಿಕ್ಷಣ ಸಂಸ್ಥೆಗಳು ಶಿಕ್ಷಣಕ್ಕೆ ಕೊಟ್ಟಷ್ಟು ಕೊಡುಗೆ ಮತ್ಯಾವ ಸಂಸ್ಥೆಯೂ ನೀಡಿಲ್ಲ. ದುರ್ದೈವ ಎಂದರೆ ಅದರಿಂದ ಶಿಕ್ಷಣ ಪಡೆದವರು ಮರಳಿ ಏನು ಕೊಡುವುದು ಬೇಡ, ಕನಿಷ್ಠ ಸ್ಮರಿಸುವಿಕೆಯೂ ಇಲ್ಲದಿರುವುದು ನೋವಿನ ಸಂಗತಿ ಎಂದರು.

ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಮಾತನಾಡಿ, ಗವಿಸಿದ್ಧೇಶ್ವರ ಮಹಾಸ್ವಾಮೀಜಿ ವಿಶ್ವ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದಾರೆ. ಈಗಾಗಲೇ ಐದು ಸಾವಿರ ವಿದ್ಯಾರ್ಥಿಗಳಿಗೆ ಆಶ್ರಯ ನೀಡಿರುವ ಅವರು, ಈಗ ವಿದ್ಯಾರ್ಥಿನಿಯರಿಗಾಗಿ ಇಂತಹ ಗುರುಕುಲ ಸ್ಥಾಪಿಸುವುದು ನಿಜಕ್ಕೂ ಶ್ಲಾಘನೀಯ ಎಂದರು.

ಶಾಸಕ ರಾಘವೇಂದ್ರ ಹಿಟ್ನಾಳ, ವಿಪ ಸದಸ್ಯೆ ಹೇಮಲತಾ ನಾಯಕ, ಐಎಎಸ್ ಟಾಪರ್‌ಚಿನ್ಮಯಿ ಪ್ರಶಾಂತ ಮಾತನಾಡಿದರು.

ಸಾನ್ನಿಧ್ಯವನ್ನು ಮುಂಡರಗಿಯ ನಾಡೋಜ ಅನ್ನದಾನೀಶ್ವರ ಮಹಾಸ್ವಾಮೀಜಿ ವಹಿಸಿದ್ದರು.

ಸಂಸದ ರಾಜಶೇಖರ ಹಿಟ್ನಾಳ, ಹಾಲಪ್ಪ ಆಚಾರ್, ಶರಣೇಗೌಡ ಪಾಟೀಲ್, ಸಂಗಣ್ಣ ಕರಡಿ, ಜಿ. ವೀರಪ್ಪ ಕೆಸರಟ್ಟಿ, ಪರಣ್ಣ ಮುನವಳ್ಳಿ, ಕೆ. ಶರಣಪ್ಪ, ಸಿ.ವಿ. ಚಂದ್ರಶೇಖರ, ಮಲ್ಲಿಕಾರ್ಜುನ ನಾಗಪ್ಪ, ಶಿವರಾಮಗೌಡ, ಡಾ. ಕೆ. ಬಸವರಾಜ, ಬಸವರಾಜ ದಢೇಸ್ಗೂರು, ಸುರೇಶ ಭೂಮರಡ್ಡಿ, ನವೀನ ಗುಳಗಣ್ಣವರ, ಪ್ರಸನ್ನ ಗಡಾದ, ವಿ.ಆರ್. ಪಾಟೀಲ್, ಎಸ್.ಆರ್. ಪಾಟೀಲ್ ಇದ್ದರು.

ಗವಿಮಠದ್ದು ಮಕ್ಕಳ ಎದೆಯಲ್ಲಿ ಅಕ್ಷರದ ದೀಪ ಹಚ್ಚುವ ಸಂಕಲ್ಪ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಪೂಜಿಸುವ ದೇವರ ಗುಡಿಯಲ್ಲಿನ ದೀಪ ಹಚ್ಚುವುದಕ್ಕಿಂತ ದೀಪವೇ ಇಲ್ಲದ ಗುಡಿಸಲಲ್ಲಿನ ಮಕ್ಕಳ ಎದೆಯಲ್ಲಿ ಅಕ್ಷರದ ಹಣತೆ ಹಚ್ಚುವುದು ಗವಿಮಠಶ್ರೀಗಳ ಪರಂಪರೆ ಮತ್ತು ಸಂಕಲ್ಪವಾಗಿದೆ ಎಂದು ಗವಿಸಿದ್ಧೇಶ್ವರ ಮಹಾಸ್ವಾಮೀಜಿ ಹೇಳಿದರು.

ಗವಿಸಿದ್ಧೇಶ್ವರ ಗುರುಕುಲ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಐದು ಸಾವಿರ ವಿದ್ಯಾರ್ಥಿಗಳನ್ನು ಪೂರ್ಣಗೊಳಿಸುವುದೇ ನಮ್ಮ ಆಶಯವಾಗಿತ್ತು. ಆದರೆ, ವಿದ್ಯಾರ್ಥಿನಿಯರಿಗೂ ಇಂಥದ್ದೊಂದು ವಸತಿ ಕಾಲೇಜು ಮಾಡಬೇಕು ಎಂದಾಗ ವಿದ್ಯಾರ್ಥಿನಿಯರಿಗಾಗಿ ಗುರುಕುಲ ಮಾಡುವ ಬಯಕೆ ಮಾಡಲಾಯಿತು. ಎಲ್ಲರ ಕಳಕಳಿ ಮತ್ತು ಕೊಡುಗೈ ದಾನಿಗಳಿಂದ ಇಂಥದ್ದೊಂದು ದೊಡ್ಡ ಶಿಕ್ಷಣ ಸಂಸ್ಥೆ ಹೆಣ್ಣುಮಕ್ಕಳಿಗಾಗಿ ತಲೆ ಎತ್ತಿದೆ ಎಂದರು. ಮರಿಶಾಂತವೀರ ಮಹಾಸ್ವಾಮಿಜಿಗಳ ಸತ್ಪರಂಪರೆ ಮತ್ತು ಶಿವಶಾಂತವೀರ ಮಹಾಸ್ವಾಮೀಜಿಗಳು ಹಾಕಿಕೊಟ್ಟ ದಾರಿಯಂತೆ ನಾವು ನಡೆಯುತ್ತಿದ್ದೇವೆ ಎಂದರು.

ಇದನ್ನು ನಾನು ನಿರಂತರವಾಗಿ ನಡೆಸಿಕೊಂಡು ಹೋಗುವುದು ಹೇಗೆ ಎನ್ನುವ ಚಿಂತೆ ನನಗೆ ಇಲ್ಲ. ಗವಿಸಿದ್ಧೇಶ್ವರ ಜೋಳಿಗೆಯ ಶಕ್ತಿ ಇರುವವರೆಗೂ ನಡೆಸಿಕೊಂಡು ಹೋಗುತ್ತದೆ. ಅದು ಇಲ್ಲದ ಕಾಲಕ್ಕೆ ಯಾರಿಗೆ ಶಕ್ತಿ ಇರುತ್ತದೆ ಅವರಿಗೆ ಅರ್ಪಿಸುತ್ತೇನೆ ಎಂದು ಹೇಳಿದರು.

ಈಗ ವಿದ್ಯಾರ್ಥಿನಿಯರಿಗಾಗಿ ಇಂಥದ್ದೊಂದು ಶಿಕ್ಷಣ ಸಂಸ್ಥೆ ಮಾಡಿದ್ದೇವೆ. ಮುಂದೆ ಗವಿಸಿದ್ಧ ಶಕ್ತಿ ನೀಡಿದರೆ ವಿದ್ಯಾರ್ಥಿಗಳಿಗೂ ಮಾಡುತ್ತೇನೆ. ಜೋಳಿಗೆ ಶಕ್ತಿ ಇರುವವರೆಗೂ ಹೀಗೆ ಮಾಡುತ್ತಲೇ ಇರುತ್ತೇನೆ ಎಂದರು.

ಶಿಕ್ಷಣದಿಂದ ಉಜ್ವಲ ಭವಿಷ್ಯ ನಿರ್ಮಾಣ: ಬಯ್ಯಾಪುರ



ದ್ವಿತೀಯ ಪಿಯುಸಿಯಲ್ಲಿ ರಾಜ್ಯಕ್ಕೆ ಎರಡನೇ ರ‍್ಯಾಂಕ್ ಪಡೆದ ಕೇಸೂರು ಗ್ರಾಮದ ವೈಷ್ಣವಿ ಹನುಮಂತರಾವ್ ದೇಸಾಯಿ ಅವರನ್ನು ಕಾಂಗ್ರೆಸ್ ಮುಖಂಡರು ಗೌರವಿಸಿದರು.

• **ಕನ್ನಡಪ್ರಭ ವಾರ್ತೆ** ಕುಷ್ಟಗಿ

ಶಿಕ್ಷಣ ಜೀವನದ ಬೆಳಕು, ವಿದ್ಯಾರ್ಥಿನಿಯರು ಉನ್ನತ ಗುರಿ ಸಾಧಿಸುವ ಮೂಲಕ ಸಮಾಜದಲ್ಲಿ ಮಾದರಿಯಾಗಬೇಕು ಎಂದು ಕಾಂಗ್ರೆಸ್ ಯುವಮುಖಂಡ ದೊಡ್ಡಬಸವನಗೌಡ ಪಾಟೀಲ ಬಯ್ಯಾಪುರ ಹೇಳಿದರು.

ತಾಲೂಕಿನ ದೋಟಿಹಾಳ, ಕೇಸೂರು ಗ್ರಾಮದಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿ ಗ್ರಾಮಕ್ಕೆ ಕೀರ್ತಿ ತಂದ ವಿದ್ಯಾರ್ಥಿನಿಯರಿಗೆ ನಡೆದ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಗ್ರಾಮಾಂತರ ಭಾಗದಲ್ಲಿ ಶಿಕ್ಷಣ ಜಾಗೃತಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿನಿಯರು ಉತ್ತಮ ಸಾಧನೆ ಮಾಡುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದರು. ಶಿಕ್ಷಣದಿಂದ ಉಜ್ವಲ ಭವಿಷ್ಯ ನಿರ್ಮಾಣವಾಗಲಿದ್ದು, ಶಿಕ್ಷಣವನ್ನು ಕೇವಲ ಅಂಕಗಳಿಗೆ ಸೀಮಿತಗೊಳಿಸದೆ ವ್ಯಕ್ತಿತ್ವ ಅಭಿವೃದ್ಧಿಗೆ ಬಳಸಿಕೊಳ್ಳಬೇಕು, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಅವಕಾಶ ಸದುಪಯೋಗ ಪಡಿಸಿಕೊಂಡರೆ ಉನ್ನತ ಹುದ್ದೆ ಅಲಂಕರಿಸಬಹುದು ಎಂದರು. ಲಾಡ್ಲೆಮಷಾಕ್ ದೋಟಿಹಾಳ ಮಾತನಾಡಿ, ವಿದ್ಯಾರ್ಥಿಗಳ ಸಾಧನೆ ಪೋಷಕರು ಹಾಗೂ ಶಿಕ್ಷಕರ ಪರಿಶ್ರಮದ ಫಲವಾಗಿದೆ ಎಂದು ಅಭಿಪ್ರಾಯಪಟ್ಟರು.

ಸನ್ಮಾನಿತ ವಿದ್ಯಾರ್ಥಿನಿಯರು ಮಾತನಾಡಿ, ತಮ್ಮ ಯಶಸ್ಸಿಗೆ ಕಾರಣರಾದ ಪೋಷಕರು ಮತ್ತು ಗುರುಗಳಿಗೆ ಕೃತಜ್ಞತೆ ಸಲ್ಲಿಸಿದರು.

ಸನ್ಮಾನ: ಕುಷ್ಟಗಿ ತಾಲೂಕಿನ ಕೇಸೂರು ಗ್ರಾಮದ ವೈಷ್ಣವಿ ಹನಮಂತರಾವ ದೇಸಾಯಿ ಎಂಬ ವಿದ್ಯಾರ್ಥಿನಿ ಪಿಯುಸಿ ವಿಜ್ಞಾನ ವಿಭಾಗದಲ್ಲಿ 598 ಅಂಕ ಗಳಿಸಿ ರಾಜ್ಯಕ್ಕೆ ಎರಡನೇ ರ‍್ಯಾಂಕಿನಲ್ಲಿ ಸಾಧನೆ ಹಾಗೂ ದೋಟಿಹಾಳ ಗ್ರಾಮದ ಗೌಂಡಿ ಕೆಲಸ ಮಾಡುವನ ಮಗಳು ಸನಾ ಮಹ್ಮದರಫೀಕ್ ಇಟಗಿ ಎಂಬ ವಿದ್ಯಾರ್ಥಿನಿ ಎಸ್ಸೆಸ್ಸೆಲ್ಸಿಯಲ್ಲಿ 592 ಅಂಕ ಗಳಿಸಿ ದೋಟಿಹಾಳ ಸರ್ಕಾರಿ ಪ್ರೌಢಶಾಲೆಗೆ ಪ್ರಥಮ ಸ್ಥಾನದಲ್ಲಿ ಸಾಧಿಸಿದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಮುಖಂಡರು ವಿದ್ಯಾರ್ಥಿನಿಯರ ಮನೆಗೆ ಭೇಟಿ ಸನ್ಮಾನಿಸಿ ಗೌರವಿಸಿದರು. ನಿವೃತ್ತ ಪ್ರಾಚಾರ್ಯ ಆದಪ್ಪ ಸಾಲವಾಡಗಿ, ಬಸವರಾಜ ಶೆಟ್ಟರ್, ಅಜ್ಮೀರಸಾಬ್ ಯಲಬುರ್ಗಿ, ಹನಮಂತರಾವ ದೇಸಾಯಿ, ಶುಖಮುನಿ ಈಳಗೇರ, ಉಮೇಶ ಮಡಿವಾಳರ, ಗುರುಸಿದ್ದಯ್ಯ ಮಳಿಮಠ, ಹೇಮನಗೌಡ ಬಸಾಪೂರ, ಮಹೇಶ ಕಾಳಗಿ, ಶ್ಯಾಮೀದಸಾಬ್ ಮುಜಾವರ,ಈರನಗೌಡ ಟೆಂಗುಂಟಿ, ಮಲ್ಲಿಕಾರ್ಜುನ ಅಂಗಡಿ, ಶ್ಯಾಹಿದ ಗಚ್ಚಿನಮನಿ, ಶಾಂತಕುಮಾರ, ಗುರುಪಾದಯ್ಯ ಮಳಿಮಠ ಇದ್ದರು.

ಇಂದು ಕೋಲ್ಡ್ ಸ್ಟೋರೇಜ್ ಉದ್ಘಾಟನೆ

ಕುಕನೂರು: ಪಟ್ಟಣದ ಎಪಿಎಂಸಿಯಲ್ಲಿ ಕೋಲ್ಡ್ ಸ್ಟೋರೇಜ್ ಉದ್ಘಾಟನೆ ಹಾಗೂ ಪಟ್ಟಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್, ಬಸವೇಶ್ವರ ಹಾಗೂ ಸಂಗೊಳ್ಳಿ ರಾಯಣ್ಣ ಮೂರ್ತಿ ಪ್ರತಿಷ್ಠಾಪನೆಯ ಭೂಮಿ ಪೂಜೆ ಕಾರ್ಯಕ್ರಮ ಏ. 4ರ ಸಂಜೆ 5 ಗಂಟೆಗೆ ಜರುಗಲಿದೆ. ಕೋಲ್ಡ್ ಸ್ಟೋರೇಜ್ ಅನ್ನು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಉದ್ಘಾಟಿಸಲಿದ್ದಾರೆ. ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕೊಪ್ಪಳ ಗವಿಮಠದ ಶ್ರೀಗವಿಸಿದ್ದೇಶ್ವರ ಸ್ವಾಮೀಜಿ, ಮುಂಡರಗಿಯ ಡಾ.ನಾಡೋಜ ಅನ್ನದಾನೀಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ, ಸಂಸದ ರಾಜಶೇಖರ ಹಿಟ್ನಾಳ, ಡಿಸಿ ಡಾ. ಸುರೇಶ ಇಟ್ನಾಳ ಹಾಗೂ ಗಣ್ಯರು, ಅಧಿಕಾರಿ ವರ್ಗದವರು ಭಾಗವಹಿಸಲಿದ್ದಾರೆ.

ಕುಡಿವ ನೀರಿಗೆ ಮುಂಜಾಗ್ರತಾ ಕ್ರಮ



ಯಲಬುರ್ಗಾದಲ್ಲಿ ಸಹಾಯವಾಣಿ ವ್ಯವಸ್ಥೆಯ ಕುರಿತು ಜನಜಾಗೃತಿ ಮೂಡಿಸಲು ಬ್ಯಾನರ್ ಅಂಟಿಸಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

• **ಕನ್ನಡಪ್ರಭ ವಾರ್ತೆ** ಯಲಬುರ್ಗಾ

ಪಟ್ಟಣದಲ್ಲಿ ಬೇಸಿಗೆ ಅವಧಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಸಮರ್ಪಕ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಪಪಂ ಮುಖ್ಯಾಧಿಕಾರಿ ನಾಗೇಶ ತಿಳಿಸಿದ್ದಾರೆ.

ಸಾರ್ವಜನಿಕರಿಗೆ ಯಾವುದೇ ಸಣ್ಣಪುಟ್ಟ ತೊಂದರೆ ಉಂಟಾದಲ್ಲಿ ಪಪಂದಿಂದ ಆರಂಭಿಸಲಾದ ಸಹಾಯವಾಣಿ ಸಂಖ್ಯೆಗೆ ಕರೆ ಮಾಡಿ ತಕ್ಷಣ ಸಮಸ್ಯೆ ಪರಿಹರಿಸಿಕೊಳ್ಳುವಂತೆ ಮನವಿ ಮಾಡಿದರು.

ಪಟ್ಟಣದಲ್ಲಿ ಸಹಾಯವಾಣಿ ವ್ಯವಸ್ಥೆಯ ಕುರಿತು ಜನಜಾಗೃತಿ ಮೂಡಿಸಲು ಬ್ಯಾನರ್‌ಅಂಟಿಸಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಮಾತನಾಡಿದ ಅವರು, ಪಟ್ಟಣದ 15 ವಾರ್ಡ್‌ಗಳಲ್ಲಿ ಒಟ್ಟು 32 ಬೋರ್‌ವೆಲ್ ಕಾರ್ಯನಿರ್ವಹಣೆಗೆ ತರಲಾಗಿದ್ದು, ಪ್ರತಿಯೊಂದು ವಾರ್ಡ್‌ಗೆ ಸಮರ್ಪಕವಾಗಿ ನೀರು ಪೂರೈಕೆ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಕುಡಿಯುವ ನೀರಿನ ಗುಣಮಟ್ಟ ಕಾಪಾಡುವ ಸಲುವಾಗಿ ನಿಯಮಿತವಾಗಿ ನೀರಿನ ಪರೀಕ್ಷೆ ನಡೆಸಲಾಗುತ್ತಿದ್ದು, ನೀರು ಸಂಗ್ರಹಿಸುವ ಸಿಸ್ಟರ್ನ್‌ಗಳ ಶುದ್ಧೀಕರಣ ಕಾರ್ಯವೂ ನಿರಂತರವಾಗಿ ನಡೆಯುತ್ತಿದೆ. ಜತೆಗೆ,ಪೈಪ್‌ಲೈನ್‌ಗಳಲ್ಲಿ ಉಂಟಾಗುವ ತಾಂತ್ರಿಕ ದೋಷ ತಕ್ಷಣವೇ ಸರಿಪಡಿಸಲು ಸಿಬ್ಬಂದಿ ನಿಯೋಜಿಸಲಾಗಿದೆ ಎಂದರು.

ಬೇಸಿಗೆ ತೀವ್ರತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಯಾವುದೇ ವಾರ್ಡ್‌ನಲ್ಲಿ ನೀರಿನ ಕೊರತೆ ಉಂಟಾಗದಂತೆ ಮುಂಚಿತವಾಗಿ ಯೋಜನೆ ರೂಪಿಸಿ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಸಾರ್ವಜನಿಕರು ನೀರನ್ನು ಮಿತವಾಗಿ ಬಳಸಿಕೊಂಡು ಪಪಂಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪಪಂ ಸಿಬ್ಬಂದಿ ಉಪಸ್ಥಿತರಿದ್ದರು.

ಕಾನೂನು ಅರಿವು ಅಗತ್ಯ | ಉಪನ್ಯಾಸ ಕಾರ್ಯಕ್ರಮದಲ್ಲಿ ವಕೀಲ ವೀರಣ್ಣ ತಳಕಲ್ ಅಭಿಪ್ರಾಯ

ಪ್ರತಿಯೊಬ್ಬರೂ ಹಕ್ಕು, ಕರ್ತವ್ಯ ಬಗ್ಗೆ ತಿಳಿದುಕೊಳ್ಳಲಿ

• **ಕನ್ನಡಪ್ರಭ ವಾರ್ತೆ** ಯಲಬುರ್ಗಾ

ಪ್ರತಿಯೊಬ್ಬ ನಾಗರಿಕರು ಹಕ್ಕು ಮತ್ತು ಕರ್ತವ್ಯ ಬಗ್ಗೆ ತಿಳಿದುಕೊಳ್ಳಬೇಕು ಎಂದು ವಕೀಲ ವೀರಣ್ಣ ತಳಕಲ್ ಹೇಳಿದರು.

ತಾಲೂಕಿನ ತುಮ್ಮರಗುದ್ದಿ ಗ್ರಾಮದ ಆದಿಶಕ್ತಿ ಅಗ್ರಮ್ಮದೇವಿ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದ 60ನೇ ಮಾಸಿಕ ಶಿವಾನುಭವ ಕಾರ್ಯಕ್ರಮದಲ್ಲಿ ಕಾನೂನು ಅರಿವು ವಿಷಯ ಕುರಿತು ಉಪನ್ಯಾಸ ನೀಡಿ ಮಾತನಾಡಿದರು. ಆಧ್ಯಾತ್ಮದಲ್ಲಿ ಮುಖ್ಯವಾದ ಕಾನೂನು ಎಂದರೆ ಧರ್ಮ.ಧರ್ಮ ಎಂದರೆ ಸತ್ಯ, ನ್ಯಾಯ, ಒಳ್ಳೆಯ ನಡೆ-ನುಡಿ. ನಾವು ಸತ್ಯದ ಮಾರ್ಗದಲ್ಲಿ ನಡೆದರೆ ಅದು ಆಧ್ಯಾತ್ಮದ ಕಾನೂನನ್ನು ಪಾಲಿಸಿದಂತಾಗುತ್ತದೆ. ಶಿವಾನುಭವ ಎಂದರೆ ನಮ್ಮ ಒಳಮನಸ್ಸಿನಲ್ಲಿ ಶಿವತತ್ವ ಅರಿತುಕೊಳ್ಳುವುದು. ಶಿವನು ಶಾಂತಿ, ಸತ್ಯ, ಸಮತೆ ಮತ್ತು ಧರ್ಮದ ಪ್ರತೀಕ. ಈ ಮೌಲ್ಯ ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ನಿಜವಾದ ಶಿವಾನುಭವ ಸಿಗುತ್ತದೆ. ಕಾನೂನು ಅರಿವು ಎಂದರೆ ಸಮಾಜದಲ್ಲಿ ನಾವು ಹೇಗೆ ಬದುಕಬೇಕು,ನಮ್ಮ ಹಕ್ಕುಗಳು ಮತ್ತು ಕರ್ತವ್ಯ ಯಾವುವು ಎಂಬುದನ್ನು ತಿಳಿದುಕೊಳ್ಳುವುದು. ಕಾನೂನು ನಮ್ಮನ್ನು ನಿಯಂತ್ರಿಸಲು ಮಾತ್ರವಲ್ಲ, ನಮ್ಮನ್ನು ರಕ್ಷಿಸಲು ಕೂಡ ಇದೆ ಎಂದರು. ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಬೆಳೆಸಲು ಧಾರ್ಮಿಕ ಹಾದಿಯಲ್ಲಿ ಸಾಗುವುದು ಅಗತ್ಯವಾಗಿದೆ, ಸಮಾಜದಲ್ಲಿ ಶಾಂತಿ ಮತ್ತು ನ್ಯಾಯ ಕಾಪಾಡಲು ಕಾನೂನು ಅರಿವು ಅತ್ಯಂತ ಅಗತ್ಯವಾಗಿದೆ.ಪ್ರತಿಯೊಬ್ಬ ನಾಗರಿಕನೂ ತನ್ನ ಹಕ್ಕುಗಳು ಹಾಗೂ ಕರ್ತವ್ಯ ತಿಳಿದುಕೊಳ್ಳಬೇಕು ಎಂದು ತಿಳಿಸಿದರು. ಕಾನೂನು ಅರಿವು ಇಲ್ಲದಿರುವುದರಿಂದ ಅನೇಕರು ತಮ್ಮ ಹಕ್ಕುಗಳಿಂದ ವಂಚಿತರಾಗುತ್ತಿದ್ದಾರೆ ಎಂದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾಧ್ಯಕ್ಷ ಮಲ್ಲು ಮಾಟರಂಗಿ ಮಾತನಾಡಿ, ಅಗ್ರಮ್ಮದೇವಿಯ ಕೃಪೆಯಿಂದ ಇಲ್ಲಿ ನಡೆಯುವ ಪ್ರತಿಯೊಂದು ಕಾರ್ಯಕ್ರಮವೂ ಭಕ್ತರಲ್ಲಿ ಹೊಸ ಶಕ್ತಿ, ಹೊಸ ನಂಬಿಕೆ ಮತ್ತು ಹೊಸ ಚೈತನ್ಯ ತುಂಬುತ್ತದೆ. ಭಕ್ತರು ತಮ್ಮ ಅನುಭವ ಹಂಚಿಕೊಳ್ಳುವುದರಿಂದ ಸಮಾಜ ದಲ್ಲಿ ಒಳ್ಳೆಯ ಮೌಲ್ಯಗಳು ಬೆಳೆಯುತ್ತವೆ. ಇಂದಿನ ಯುಗದಲ್ಲಿ ಮಾನಸಿಕ ಒತ್ತಡ, ಸಮಸ್ಯೆಗಳು ಹೆಚ್ಚಾಗಿರುವಾಗ ಇಂತಹ ಕಾರ್ಯಕ್ರಮಗಳು ನಮಗೆ ಮನಶಾಂತಿ ಮತ್ತು ಧೈರ್ಯ ನೀಡುತ್ತವೆ ಎಂದರು. ತಾಪಂ ಮಾಜಿ ಸದಸ್ಯ ಶರಣಪ್ಪ ಈಳಿಗೇರ್‌ಮಾತ ನಾಡಿದರು. ಈ ಸಂದರ್ಭ ಮಹಾದೇವಯ್ಯ ಹಿರೇಮಠ, ರಾಜಶೇಖರಯ್ಯ ಹಿರೇಮಠ, ಬಸಪ್ಪ ಕುದರಿಕೋಟಗಿ, ದುರಗಪ್ಪ ನಡುವಿನಮನಿ, ಮಹಾದೇವಯ್ಯ ಬಸಯ್ಯ ಹಿರೇಮಠ, ಮಂಗಳೇಶ ಶ್ಯಾಗೋಟಿ, ಬಸವರಾಜ ಮಾಲಿಗೌಡ್ರ,ರುದ್ರಯ್ಯ ಹಿರೇಮಠ, ಕುಬೇರಪ್ಪ ತೋಪಲಕಟ್ಟಿ, ಕಳಕನಗೌಡ ಪಾಟೀಲ, ಶ್ರೀಶೈಲ ಚಿಕ್ಕೊಪ್ಪದ, ಮಲ್ಲಪ್ಪ ಬಡಿಗೇರ, ಕುಮಾರ ಯರಿಗೇರಿ ಗ್ರಾಮದ ಗುರು-ಹಿರಿಯರು,ಯುವಕರು ಇದ್ದರು.



ಶಿವಾನುಭವ ಕಾರ್ಯಕ್ರಮದಲ್ಲಿ ವಕೀಲ ವೀರಣ್ಣ ತಳಕಲ್ ಮಾತನಾಡಿದರು.

> ಕಾನೂನು ಅರಿವು ಎಂದರೆ ಸಮಾಜದಲ್ಲಿ ನಾವು ಹೇಗೆ ಬದುಕಬೇಕು,ನಮ್ಮ ಹಕ್ಕುಗಳು ಮತ್ತು ಕರ್ತವ್ಯ ಯಾವುವು ಎಂಬುದನ್ನು ತಿಳಿದುಕೊಳ್ಳುವುದು. ಕಾನೂನು ನಮ್ಮನ್ನು ನಿಯಂತ್ರಿಸಲು ಮಾತ್ರವಲ್ಲ, ನಮ್ಮನ್ನು ರಕ್ಷಿಸಲು ಕೂಡ ಇದೆ.
> • **ವಕೀಲ ವೀರಣ್ಣ ತಳಕಲ್**

ಮಲ್ಲಿಕಾರ್ಜುನ ಖರ್ಗೆ ಮುಖ್ಯಮಂತ್ರಿ ಆಗಲಿ ಎನ್ನುವುದು ನನ್ನ ಅಭಿಪ್ರಾಯವಾಗಿದೆ. ಹಾಗಂತ ನಾನು ಡಿ.ಕೆ. ಶಿವಕುಮಾರ ಆಗಬಾರದು ಎನ್ನುವುದಿಲ್ಲ. ಶಾಸಕರಾಗಿರುವ ಪ್ರತಿಯೊಬ್ಬರೂ ಮುಖ್ಯಮಂತ್ರಿ ಆಗಲು ಅರ್ಹರಿರುತ್ತಾರೆ
• **ಬಸವರಾಜ ರಾಯರಡ್ಡಿ** ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ

ಸುದ್ದಿ ಸಿಂಚನ

ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ನಿಶ್ಚಿತ: ರಾಘವೇಂದ್ರ ಹಿಟ್ನಾಳ

ಕೊಪ್ಪಳ: ಉಪ ಚುನಾವಣೆಯ ಎರಡೂ ಕ್ಷೇತ್ರಗಳಲ್ಲಿಯೂ ಕಾಂಗ್ರೆಸ್ ಭರ್ಜರಿ ಜಯಭೇರಿ ಬಾರಿಸುತ್ತದೆ ಎಂದು ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ



ಅವರು, ನಿರೀಕ್ಷೆ ಮೀರಿ ಗೆಲ್ಲುತ್ತೇವೆ ಮತ್ತು ಅತ್ಯಧಿಕ ಮತಗಳ ಅಂತರದಿಂದ ಗೆಲ್ಲುವುದು ಶತಸಿದ್ಧ ಎಂದು ಹೇಳಿದರು. ರಾಜ್ಯದಲ್ಲಿ ಜಾರಿ ಮಾಡಿರುವ ಗ್ಯಾರಂಟಿ ಯೋಜನೆ ಸಮರ್ಪಕ ಅನುಷ್ಠಾನದಿಂದ ನೂರಕ್ಕೆ ನೂರು ಕಾಂಗ್ರೆಸ್ ಗೆಲ್ಲುತ್ತದೆ ಎಂದರು. ಉಪಚುನಾವಣೆಯ ಬಳಿಕ ರಾಜ್ಯದಲ್ಲಿ ಯಾವುದೇ ರಾಜಕೀಯ ಬೆಳವಣಿಗೆ ಯಾಗುವುದಿಲ್ಲ. ಅದೆಲ್ಲವೂ ಸುಳ್ಳು ಎಂದ ಅವರು, ಹೈಕಮಾಂಡ್ ಸ್ಪಷ್ಟ ನಿರ್ಧಾರ ತೆಗೆದುಕೊಳ್ಳುತ್ತದೆ. ಸಚಿವ ಸಂಪುಟ ಪುನರ್ ರಚನೆಯಾಗುವ ವಿಶ್ವಾಸವಿದೆ ಎಂದರು.ಶಾಸಕ ಇಕ್ಬಾಲ್ ಹುಸೇನ್ ಹಲವು ಬಾರಿ ಹೇಳಿದ್ದಾರೆ. ಅವರಿಗೆ ನೋಟಿಸ್ ಸಹ ಕೆಪಿಸಿಸಿಯಿಂದ ನೀಡಿದ್ದಾರೆ. ಹೀಗಾಗಿ, ಅವರ ಮಾತಿಗೆ ಮಹತ್ವ ನೀಡುವ ಅಗತ್ಯವಿಲ್ಲ ಎಂದರು.

ಉಪಚುನಾವಣೆಯಲ್ಲಿ ಬಿಜೆಪಿ ಗೆಲುವು ನಿಶ್ಚಿತ: ಸಂಸದ ಬೊಮ್ಮಾಯಿ

ಕೊಪ್ಪಳ: ರಾಜ್ಯದ ಎರಡೂ ಕ್ಷೇತ್ರಗಳ ಉಪಚುನಾವಣೆ ಯಲ್ಲಿ ಬಿಜೆಪಿ ಗೆಲ್ಲಲಿದೆ ಮತ್ತು ಐದು ರಾಜ್ಯಗಳ



ಉಪಚುನಾವಣೆ ಯಲ್ಲಿಯೂ ಬಿಜೆಪಿಗೆ ಉತ್ತಮ ಬೆಂಬಲ ದೊರೆಯಲಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ವಿಶ್ವಾಸ ವ್ಯಕ್ತಪಡಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಜನರು ರೋಸಿ ಹೋಗಿ ದ್ದಾರೆ. ಅದರ ಪರಿಣಾಮ ಫಲಿತಾಂಶದಿಂದ ಗೊತ್ತಾಗು ತ್ತದೆ ಎಂದರು. ಇನ್ನು ಪಶ್ಚಿಮ ಬಂಗಾಳದಲ್ಲಿ ಯೂ ಬಿಜೆಪಿಗೆ ಉತ್ತಮ ಫಲಿತಾಂಶ ಬರುವ ನಿರೀಕ್ಷೆ ಇದೆ. ಈ ಮೂಲಕ ದೇಶದಲ್ಲಿ ಮತ್ತಷ್ಟು ಬಿಜೆಪಿ ಬಲಗೊಳ್ಳುತ್ತದೆ ಎಂದರು. ಜಗತ್ತು ಮುಂದೆ ಹೋಗುತ್ತಿದ್ದರೆ ಕಾಂಗ್ರೆಸ್ ಮತ್ತೆ ಓಬಿರಾಯನ ಕಾಲದತ್ತ ಸಾಗುತ್ತಿದೆ. ಮತ ಯಂತ್ರದ ಮೂಲಕ ಕಾಂಗ್ರೆಸ್ ಗೆಲುವು ಸಾಧಿಸಿದೆ. ಆದರೂ ಮತಯಂತ್ರದ ಮೇಲೆ ಅನುಮಾನ ವ್ಯಕ್ತಪ ಡಿಸಿ, ಮತ್ತೆ ಬ್ಯಾಲೆಟ್ ಜಾರಿ ಮಾಡುತ್ತಿರುವುದು ನಾಚಿಕೆ ಗೇಡಿನ ಸಂಗತಿಯಾಗಿದೆ. ರಾಜ್ಯ ಕಾಂಗ್ರೆಸ್ ಮತ್ತೆ ಬ್ಯಾಲೆಟ್ ಕಡೆಗೆ ಮುಖ ಮಾಡುತ್ತಿರುವುದು ಯಾವ ನ್ಯಾಯ? ಅಷ್ಟೇ ಅಲ್ಲ, ಈ ಹಿಂಗೆ ಬ್ಯಾಲೆಟ್‌ನಲ್ಲಿ ಮೋಸವಾಗುತ್ತಿದೆ ಎನ್ನುವ ಕಾರಣಕ್ಕಾಗಿಯೇ ಮತಯಂತ್ರ ಮಾಡಲಾಗಿದೆ ಎಂದರು.

ಘನಮಠ ಶಿವಯೋಗಿ ಪ್ರೌಢಶಾಲೆ ವಿದ್ಯಾರ್ಥಿಗಳ ಉತ್ತಮ ಸಾಧನೆ

ಗಂಗಾವತಿ: ತಾಲೂಕಿನ ಮರಳಿ ಗ್ರಾಮದ ಕೃಷಿ ಋಷಿ ಶ್ರೀ ಘನಮಠ ಶಿವಯೋಗಿ ಪ್ರೌಢಶಾಲೆ ಶಾಲೆಯ ವಿದ್ಯಾರ್ಥಿಗಳು ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿ ಶೇ. 100 ರಷ್ಟು ಅಂಕ ಶಾಲೆಗೆ ಲಭಿಸಿದೆ.ಆಶಾ ಬೇಗಂ 538 (87%) ಕೆ.ವಿನೋದ್ 515 (83.%) ಅಂಕಗಳೊಂದಿಗೆ ಉನ್ನತ ದರ್ಜೆಯಲ್ಲಿ ತೇರ್ಗಡೆಯಾಗಿ ಶಾಲೆಗೆ ಕೀರ್ತಿ ತಂದಿದ್ದಾರೆ. ಒಟ್ಟು 22 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 2 ವಿದ್ಯಾರ್ಥಿಗಳು ಉನ್ನತ ದರ್ಜೆಯಲ್ಲಿ ಪಾಸಾಗಿದ್ದಾರೆ. 12 ವಿದ್ಯಾರ್ಥಿಗಳು ಪ್ರಥಮ ದರ್ಜೆ, 5 ವಿದ್ಯಾರ್ಥಿಗಳು ದ್ವಿತೀಯ ದರ್ಜೆ, 3 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ತೇರ್ಗಡೆಯಾಗಿ ಸಾಧನೆ ಮಾಡಿದ್ದಾರೆ. ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಕೃಷಿ ಋಷಿ ಶ್ರೀಘನಮಠ ಶಿವಯೋಗಿ ಪ್ರೌಢ ಶಾಲೆಯ ಅಧ್ಯಕ್ಷ ಎಚ್.ಎಂ. ಗುರುಸ್ವಾಮಿ,ಆಡಳಿತಾಧಿಕಾರಿ ಎಚ್.ಎಂ.ಸಚ್ಚಿದಾನಂದ ಸ್ವಾಮಿ, ಕಾರ್ಯದರ್ಶಿ ಬಿ. ದುರಗಪ್ಪ, ಮುಖ್ಯೋಪಾಧ್ಯಾಯ ಮೌನೇಶ್ ಬಡಿಗೇರ್‌ಮತ್ತು ಶಿಕ್ಷಕರು ಅಭಿನಂದಿಸಿದ್ದಾರೆ.



KP

ಕುಷ್ಟಗಿ ತಾಲೂಕಿನ ಬಿಜಕಲ್ ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಈ ವರ್ಷದ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ.100ರಷ್ಟು ಫಲಿತಾಂಶ ಬಂದಿರುವ ಹಿನ್ನೆಲೆಯಲ್ಲಿ ಶಾಲಾ ಶಿಕ್ಷಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅಭಿನಂದನಾ ಸಮಾರಂಭ ನಡೆಯಿತು.



KP

ಹನುಮಸಾಗರ ಅಂಬಾಭವಾನಿ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ಯುವಜನರಲ್ಲಿ ಸಂಸ್ಕಾರ, ಜವಾಬ್ದಾರಿ ಜಾಗೃತಿ ಬೆಳೆಸುವ ಉದ್ದೇಶದಿಂದ ಆಯೋಜಿಸಿದ್ದ ಜಾಗೃತವೇ ನಮ್ಮ ಸಮಾಜದ ರಕ್ಷಣೆ ವಿಚಾರ ಸಂಕಿರಣವನ್ನು ಪ್ರಮುಖರು ಉದ್ಘಾಟಿಸಿದರು.



KP

ಕುಷ್ಟಗಿ ತಾಲೂಕಿನ ದೋಟಿಹಾಳ ಸರ್ಕಾರಿ ಪ್ರೌಢಶಾಲೆಗೆ ಎಸ್ಸೆಸ್ಸೆಲ್ಸಿಯಲ್ಲಿ ಉತ್ತಮ ಸಾಧನೆಗೈದು ಶಾಲೆಗೆ ಪ್ರಥಮ ಸ್ಥಾನ ಗಳಿಸಿದ ಹಿನ್ನೆಲೆ ಕಾಂಗ್ರೆಸ್ ಮುಖಂಡ ದೊಡ್ಡಬಸನಗೌಡ ಬಯ್ಯಾಪುರ ಹಾಗೂ ಲಾಡ್ಲೇಮಷಾಕ ದೋಟಿಹಾಳ ಸನ್ಮಾನಿಸಿದರು.

33 ನೂತನ ಕ್ರಸ್ಟ್‌ಗೇಟ್ ಉದ್ಘಾಟನೆ ಶೀಘ್ರ

ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್‌ಗೇಟ್‌ಗಳ ಅಳವಡಿಕೆ ಕಾಮಗಾರಿ ಪರಿವೀಕ್ಷಣೆಯಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ತುಂಗಭದ್ರಾ ಜಲಾಶಯದ ಕ್ರಸ್ಟ್‌ಗೇಟ್ ಬದಲಾಯಿಸುವ ಕಾರ್ಯ ಪೂರ್ಣಗೊಂಡಿದ್ದು, ಶೀಘ್ರ ಉದ್ಘಾಟನೆ ಮಾಡಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹೇಳಿದರು.

ಭಾನುವಾರ ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡಿ, ಬಹುತೇಕ ಅಂತಿಮ ಹಂತ ತಲುಪಿದ ಗೇಟ್ ಅಳವಡಿಕೆ ಕಾರ್ಯ ಪರಿಶೀಲಿಸಿ ಅವರು ಮಾತನಾಡಿದರು.

ತುಂಗಭದ್ರಾ ಜಲಾಶಯ ಕರ್ನಾಟಕ, ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯದ ಲಕ್ಷಾಂತರ ರೈತರ ಜೀವನಾಡಿಯಾಗಿದೆ. ಹೊಸಪೇಟೆ, ಕೊಪ್ಪಳ, ಗಂಗಾವತಿ, ಕಾರಟಗಿ, ಕನಕಗಿರಿ, ಸಿಂಧನೂರ, ಮಸ್ಕಿ, ಮಾನವಿ, ಸಿರವಾರ, ರಾಯಚೂರು, ಬಳ್ಳಾರಿ ಸೇರಿದಂತೆ ಈ ಭಾಗದ ಲಕ್ಷಾಂತರ ಸಂಖ್ಯೆಯ ರೈತರ ಬದುಕಿಗೆ ಆಸರೆಯಾಗಿದೆ. ತುಂಗಭದ್ರಾ ಜಲಾಶಯದ ಎಲ್ಲ 33 ಕ್ರಸ್ಟ್‌ಗೇಟ್ ಅಳವಡಿಕೆ ಕಾರ್ಯವು ನಿಗದಿತ ಸಮಯದಲ್ಲಿ ಮುಗಿದಿದ್ದು, ಸಣ್ಣ ಪುಟ್ಟ ಕೆಲಸಗಳು ಮಾತ್ರ ಬಾಕಿ ಇವೆ. ಈ ಎಲ್ಲ ಕಾರ್ಯ ಶೀಘ್ರ ಪೂರ್ಣಗೊಳಿಸುವುದಾಗಿ ಅಧಿಕಾರಿಗಳು ಹೇಳಿದ್ದು, ಶೀಘ್ರ ಸಿದ್ಧತೆ ಮಾಡಿಕೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಜಲಾಶಯದ ಕ್ರಸ್ಟ್‌ಗೇಟ್ ಬದಲಾವಣೆಯ ಮಹತ್ವದ ಕಾರ್ಯಕ್ಕೆ ನಾವು ತೆಗೆದುಕೊಂಡು ತೀರ್ಮಾನಕ್ಕೆ ಫಲ ನೀಡುವಂತಹ ಕೆಲಸ



ತುಂಗಭದ್ರಾ ಜಲಾಶಯ ಕ್ರಸ್ಟ್‌ಗೇಟ್‌ಗಳ ನಿರ್ಮಾಣ ಕಾರ್ಯವನ್ನು ಡಿಸಿಎಂ ಡಿ.ಕೆ. ಶಿವಕುಮಾರ ಪರಿಶೀಲನೆ ಮಾಡಿದರು.

ಅಧಿಕಾರಿಗಳು ಮಾಡಿದ್ದಾರೆ ಎಂದರು.

ಸದ್ಯ ಜಲಾಶಯದಲ್ಲಿ 10.5 ಟಿಎಂಸಿ ನೀರಿದ್ದು, ಈಗ ಮಳೆ ಪ್ರಾರಂಭವಾದರೆ ಎರಡು ತಿಂಗಳಲ್ಲಿ ಸುಮಾರು 44 ಟಿಎಂಸಿ ನೀರು ಸಂಗ್ರಹವಾಗಲಿದೆ. ಕ್ರಸ್ಟ್‌ಗೇಟ್ ಅಳವಡಿಕೆ ದೊಡ್ಡ ಸವಾಲಾಗಿತ್ತು. ಈ ಕಾರ್ಯ ಯಶಸ್ವಿಯಾಗಿ ನಡೆಸಿ ನಾವು ದೇಶಕ್ಕೆ ಮಾದರಿಯಾಗಿದ್ದೇವೆ. ಇದರಿಂದ ಇಂದು ದೇಶವೇ ನಮ್ಮ ರಾಜ್ಯದತ್ತ ತಿರುಗಿ ನೋಡುತ್ತಿದೆ ಎಂದರು.

ಕಳೆದ ಎರಡು ವರ್ಷಗಳ ಹಿಂದೆ ತುಂಗಭದ್ರಾ ಜಲಾಶಯದ ಗೇಟ್ ಸಂಖ್ಯೆ -19 ಕೊಚ್ಚಿ ಹೋಗಿತ್ತು. ಈ ಬಗ್ಗೆ ಸಚಿವರು, ಶಾಸಕರು ಮಾಹಿತಿ ನೀಡಿದ ಮರುದಿನವೇ ನಾನು ಸ್ಥಳಕ್ಕೆ ಬಂದು ಪರಿಶೀಲನೆ ನಡೆಸಿ, ಕನ್ನಯ್ಯ ನಾಯ್ಡು ಅವರೊಂದಿಗೆ ಚರ್ಚಿಸಿ, ಗೇಟ್ ಅಳವಡಿಕೆಯ ಬಗ್ಗೆ ತೀರ್ಮಾನ ತೆಗೆದುಕೊಳ್ಳಲಾಗಿತ್ತು ಎಂದರು.

ತಜ್ಞರ ವರದಿಯಂತೆ ಕ್ರಸ್ಟ್‌ಗೇಟ್ ಅಳವಡಿಕೆ ಕಾರ್ಯದಿಂದ ಅಣೆಕಟ್ಟಿನ ಆಯಸ್ಸು ಮುಂದಿನ 50 ವರ್ಷಗಳ ವರೆಗೆ ವೃದ್ಧಿಸಲಿದೆ. ತಜ್ಞರ ವರದಿಯಂತೆ ಹೊಸ ಚೈನ್ ಅಳವಡಿಸಲು ನಿರ್ಧರಿಸಿದ್ದು, ಮೊದಲ ಸೆಟ್ ಹೊಸ ಚೈನ್ ಮೇ 7ರಂದು ಆಗಮಿಸಲಿದೆ. ಮೇ ಅಂತ್ಯದೊಳಗೆ ಚೈನ್ ಅಳವಡಿಕೆ ಕಾರ್ಯ ಸಂಪೂರ್ಣ ಮುಗಿಯಲಿದೆ ಎಂದರು.

> ತುಂಗಭದ್ರಾ ಜಲಾಶಯ ಕರ್ನಾಟಕ, ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯದ ಲಕ್ಷಾಂತರ ರೈತರ ಜೀವನಾಡಿಯಾಗಿದೆ. ಹೊಸಪೇಟೆ, ಕೊಪ್ಪಳ, ಗಂಗಾವತಿ, ಕಾರಟಗಿ, ಕನಕಗಿರಿ, ಸಿಂಧನೂರ, ಮಸ್ಕಿ, ಮಾನವಿ, ಸಿರವಾರ, ರಾಯಚೂರು, ಬಳ್ಳಾರಿ ಸೇರಿದಂತೆ ಈ ಭಾಗದ ಲಕ್ಷಾಂತರ ಸಂಖ್ಯೆಯ ರೈತರ ಬದುಕಿಗೆ ಆಸರೆಯಾಗಿದೆ. ತುಂಗಭದ್ರಾ ಜಲಾಶಯದ ಎಲ್ಲ 33 ಕ್ರಸ್ಟ್‌ಗೇಟ್ ಅಳವಡಿಕೆ ಕಾರ್ಯವು ನಿಗದಿತ ಸಮಯದಲ್ಲಿ ಮುಗಿದಿದ್ದು, ಸಣ್ಣ ಪುಟ್ಟ ಕೆಲಸಗಳು ಮಾತ್ರ ಬಾಕಿ ಇವೆ.
> • **ಡಿ.ಕೆ. ಶಿವಕುಮಾರ,** ಡಿಸಿಎಂ

ತುಂಗಭದ್ರಾ ಅಣೆಕಟ್ಟಿನ ಸುತ್ತಲಿನ ಕೈಗಾರಿಕೆಗಳಿಂದ ರಾಸಾಯನಿಕಯುಕ್ತ ನೀರು ಅಣೆಕಟ್ಟನ್ನು ಸೇರುತ್ತಿರುವ ಬಗ್ಗೆ ವರದಿ ಬಂದಿದ್ದು, ಈ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು. ಜನರ ಆರೋಗ್ಯ ಮತ್ತು ಬೆಳೆಗಳ ರಕ್ಷಣೆ ಸರ್ಕಾರದ ಆದ್ಯತೆಯಾಗಿದೆ ಎಂದರು.

ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ಎಸ್. ತಂಗಡಗಿ, ಅರಣ್ಯ, ಪರಿಸರ ಹಾಗೂ ಜೀವಿ ಶಾಸ್ತ್ರ ಸಚಿವ ಈಶ್ವರ ಬಿ. ಖಂಡ್ರೆ, ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವ ಕೆ.ಎಚ್. ಮುನಿಯಪ್ಪ, ಸಂಸದ ಕೆ. ರಾಜಶೇಖರ ಬಸವರಾಜ ಹಿಟ್ನಾಳ, ಬಳ್ಳಾರಿ ಸಂಸದ ಇ. ತುಕಾರಾಂ, ಶಾಸಕರಾದ ಎಚ್. ಆರ್. ಗವಿಯಪ್ಪ, ಎಂ.ಪಿ. ಲತಾ, ಡಾ. ಎನ್.ಟಿ. ಶ್ರೀನಿವಾಸ, ಅನ್ನಪೂರ್ಣಾ ತುಕಾರಾಂ, ಮಾಜಿ ಸಚಿವರಾದ ಅಮರೇಗೌಡ ಪಾಟೀಲ ಬಯ್ಯಾಪುರ, ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ, ವಿಜಯನಗರ ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ, ಜಿಪಂ ಸಿಇಒ ನೋಂಗ್ಜಾಯ್ ಮೋಹಮ್ಮದ್ ಅಲಿ ಅಕ್ರಮ್ ಷಾ, ಎಸ್ಪಿ ಎಸ್. ಜಾಹ್ನವಿ, ಕೊಪ್ಪಳ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಕೊಪ್ಪಳ ಎಸ್ಪಿ ಡಾ. ರಾಮ್ ಎಲ್. ಅರಸಿದ್ದಿ, ಹೆಚ್ಚುವರಿ ಜಿಲ್ಲಾ ವರಿಷ್ಠಾಧಿಕಾರಿ ಆರ್. ಹೇಮಂತ್ ಕುಮಾರ್, ಟಿಬಿ ಬೋರ್ಡ್ ಹಾಗೂ ಕೆ.ಎನ್. ಎನ್. ಎಲ್. ಅಧಿಕಾರಿ, ಟಿಬಿ ಬೋರ್ಡ್ ಕಾರ್ಯದರ್ಶಿ ಒ.ಆರ್.ಕೆ. ರೆಡ್ಡಿ, ಮುಖ್ಯ ಎಂಜಿನಿಯರ್ ಶ್ರೀನಿವಾಸ ಮಲ್ಲಿಗಿವಾಡ, ಎಸ್.ಇ. ನಾರಾಯಣ ನಾಯ್ಕ, ಇಇ ನಾಗನಾಥ, ಎಇಇ ಧರ್ಮರಾಜ್ ಹಾಗೂ ಜ್ಞಾನೇಶ್ವರ, ಎಇಇ ಜಾನಕಾರ, ಶಾಖಾ ಅಧಿಕಾರಿಗಳಾದ ಜಿ. ಕಿರಣ, ಪಂಪಾಪತಿ ಡಿ.ಕೆ. ಮತ್ತು ಹುಲಿರಾಜ್ ಉಪಸ್ಥಿತರಿದ್ದರು.

ಶಾಲಾ ಶಿಕ್ಷಕರು, ವಿದ್ಯಾರ್ಥಿ ಸಹಕಾರದಿಂದ ಸಾಧನೆ

ಎಸ್ಸೆಸ್ಸೆಲ್ಸಿಯಲ್ಲಿ ಸಾಧನೆಗೈದ ಶಿಕ್ಷಕರಿಗೆ, ವಿದ್ಯಾರ್ಥಿಗಳಿಗೆ ಅಭಿನಂದನೆ ಸಮಾರಂಭ

• **ಕನ್ನಡಪ್ರಭ ವಾರ್ತೆ** ಕುಷ್ಟಗಿ

ತಾಲೂಕಿನ ಬಿಜಕಲ್ ಗ್ರಾಮದ ಸರ್ಕಾರಿ ಪ್ರೌಢ ಶಾಲೆ ಈ ಪ್ರಸಕ್ತ ವರ್ಷದ ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲಿ ಶೇ.100ರಷ್ಟು ಫಲಿತಾಂಶ ಬಂದಿರುವ ಹಿನ್ನೆಲೆ ಶಾಲಾ ಶಿಕ್ಷಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅಭಿನಂದನಾ ಸಮಾರಂಭ ನಡೆಯಿತು.

ಮುಖ್ಯೋಪಾಧ್ಯಾಯ ಬಸವರಾಜ ಬಾಗಲಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪಾಲಕರ ಸಹಕಾರದಿಂದಈಸಾಧನೆಸಾಧ್ಯವಾಗಿದೆ.ಪಾಲಕರು ಮಕ್ಕಳಿಗಾಗಿ ಆಸ್ತಿ ಮಾಡುವುದಕ್ಕಿಂತ ಮಕ್ಕಳನ್ನೇ ಒಂದು ಆಸ್ತಿಯನ್ನಾಗಿ ಮಾಡಲು ಸಂಕಲ್ಪ ತೊಡಬೇಕು ಎಂದರು.

ಶಾಲೆಯಲ್ಲಿ ಮೂಲಭೂತ ಸೌಕರ್ಯಗಳೊಂದಿಗೆ ಅನುಭವಿ ಶಿಕ್ಷಕರಿಂದ ಉತ್ತಮ ಶಿಕ್ಷಣ ಬೋಧನೆ ಯಾಗುತ್ತಿದ್ದು, ಗ್ರಾಮಸ್ಥರು ತಮ್ಮ ಮಕ್ಕಳನ್ನು ಅನ್ಯಗ್ರಾಮಗಳಿಗೆ ಕಳಿಸದೆ ಇದೇ ಗ್ರಾಮದ ಶಾಲೆಯಲ್ಲಿ ವ್ಯಾಸಂಗ ಮಾಡಿಸಬೇಕು ಎಂದರು.

ಶಿಕ್ಷಕ ಹಂಪಯ್ಯ ಜಂಬಲದಿನ್ನಿ ಮಾತನಾಡಿ, ಬಿಜಕಲ್ ಗ್ರಾಮದಲ್ಲಿ ವಿದ್ಯಾರ್ಥಿಗಳಲ್ಲಿ ಮೊಬೈಲ್ ಗೀಳು ಕಡಿಮೆ ಮಾಡಿಕೊಂಡು ಪಾಲಕರ ಶಿಕ್ಷಕರ ಸಹಕಾರದೊಂದಿಗೆ ಗ್ರಂಥಾಲಯ ಸ್ಥಾಪಿಸಿಕೊಂಡು ಪುಸ್ತಕ ಪ್ರೇಮ ಹೆಚ್ಚಿಸಿಕೊಳ್ಳುತ್ತಿದ್ದು ಉತ್ತಮ ಬೆಳವಣಿಗೆಯಾಗಿದೆ ಮುಂದಿನ ದಿನಗಳಲ್ಲಿ ಎಲ್ಲ ವಿದ್ಯಾರ್ಥಿಗಳು ಗ್ರಂಥಾಲಯ ಸ್ಥಾಪಿಸಿಕೊಳ್ಳುವುದು ತಮ್ಮ ಭವಿಷ್ಯಕ್ಕೆ ಉತ್ತಮ ನಡೆಯಾಗಿದೆ ಎಂದ ಅವರು, ಎಸ್ಸೆಸ್ಸೆಲ್ಸಿ ಪರೀಕ್ಷೆಯ ಫಲಿತಾಂಶ ನೂರರಷ್ಟು ಆಗುವಲ್ಲಿ ಮಕ್ಕಳ ಮಹತ್ವದ ಪಾತ್ರ ಅಡಗಿದೆ ಎಂದರು. ಶಿಕ್ಷಕ ಸಂತೋಷ ನಾಗಲೋಟಿ ಹಾಗೂ ವಿಜಯಕುಮಾರ ಬಿರಾದಾರ, ಪ್ರಸನ್ನಕುಮಾರ, ಶಶಿಧರ್‌ಗೊರಬಾಳ, ವಿಜಯಲಕ್ಷ್ಮಿ ದೇಸಾಯಿ, ಗ್ರಾಮಸ್ಥರ ಪರ ಭೀಮಣ್ಣ ಹೂಗಾರ್, ಕುಂಟೆಪ್ಪ ತಳವಾರ್‌ಗ್ರಾಮದ ಅಭಿವೃದ್ಧಿಗಾಗಿ ಶಿಕ್ಷಣದ ಮಹತ್ವ ಕುರಿತು ಮಾತನಾಡಿದರು.

- ಬಿಜಕಲ್ ಗ್ರಾಮದಲ್ಲಿ ವಿದ್ಯಾರ್ಥಿಗಳಲ್ಲಿ ಮೊಬೈಲ್ ಗೀಳು ಕಡಿಮೆ ಮಾಡಿಕೊಂಡು ಪಾಲಕರ ಶಿಕ್ಷಕರ ಸಹಕಾರದೊಂದಿಗೆ ಗ್ರಂಥಾಲಯ ಸ್ಥಾಪಿಸಿಕೊಂಡು ಪುಸ್ತಕ ಪ್ರೇಮ ಹೆಚ್ಚಿಸಿಕೊಳ್ಳುತ್ತಿದ್ದು ಉತ್ತಮ ಬೆಳವಣಿಗೆ
- ಶಾಲೆಯಲ್ಲಿ ಮೂಲಭೂತ ಸೌಕರ್ಯಗಳೊಂದಿಗೆ ಅನುಭವಿ ಶಿಕ್ಷಕರಿಂದ ಉತ್ತಮ ಶಿಕ್ಷಣ ಬೋಧನೆ
- ಗ್ರಾಮಸ್ಥರು ತಮ್ಮ ಮಕ್ಕಳನ್ನು ಅನ್ಯಗ್ರಾಮಗಳಿಗೆ ಕಳಿಸದೆ ಇದೇ ಗ್ರಾಮದ ಶಾಲೆಯಲ್ಲಿ ವ್ಯಾಸಂಗ ಮಾಡಿಸಬೇಕು
- ಎಸ್ಸೆಸ್ಸೆಲ್ಸಿ ಪರೀಕ್ಷೆಯ ಫಲಿತಾಂಶ ನೂರರಷ್ಟು ಆಗುವಲ್ಲಿ ಮಕ್ಕಳ ಮಹತ್ವದ ಪಾತ್ರ ಅಡಗಿದೆ.

ಮಂಜುನಾಥ ಬನ್ನಿಗೋಳ, ದೇವರಾಜ ವಿಶ್ವಕರ್ಮ, ಮಂಜುನಾಥ ಗುಜಮಾಗಡಿ ಹಾಗೂ ಮಂಜುನಾಥ್ ಬೆಳಗಲ್ ಕಾರ್ಯಕ್ರಮ ಆಯೋಜಿಸಿ ಶೈಕ್ಷಣಿಕ ಜಾಗೃತಿ ಮೂಡಿಸುವಲ್ಲಿ ಯಶಸ್ವಿಯಾದರು.

ಶಿಕ್ಷಕರಿಗೆ ವಿದ್ಯಾರ್ಥಿಗಳಿಗೆ ಗ್ರಾಮಸ್ಥರು ಸನ್ಮಾನಿಸಿ ಗೌರವಿಸಿದರು. ಕಲಾವಿದ ನರಸಿಂಹದಾಸ್ ತೋಟದ ಶೈಕ್ಷಣಿಕ ಜಾಗೃತಿ ಗೀತೆ ಹಾಡಿದರು.

ಎಸ್ ಡಿಎಂಸಿ ಅಧ್ಯಕ್ಷ ವೀರನಗೌಡ ಪೊಲೀಸ್ ಪಾಟೀಲ್, ಗೋಕುಲ ಕೃಷ್ಣಪ್ಪ ತೆಗ್ಗಿನಮನಿ, ಮಾರುತಿ ಭೋವಿ, ಬಸವಂತಪ್ಪ ಕರಿಚಂದನ, ಹನುಮಂತ ಭೋವಿ, ಮಲ್ಲಮ್ಮ ವೀರಾಪುರ, ನಾಗಮ್ಮ ಕಂಬಳಿ, ಸಾವಿತ್ರಿ ತಳುವಗೇರಾ, ಮಳ್ಳಪ್ಪ ಕಲಕೇರಿ, ನೀಲಕಂಠಪ್ಪ ಕಮ್ಮಾರ, ಸಂಗಪ್ಪ ಕೊಪ್ಪಳ, ಮಲ್ಲಿಕಾರ್ಜುನ ಉಪನಾಳ, ಶ್ರೀಧರ ವಟಕಲಕುಂಟಿ ಸೇರಿದಂತೆ ಅನೇಕರು ಇದ್ದರು. ಮಹಾಲಕ್ಷ್ಮಿ ಹಾಗೂ ಸಂಗಡಿಗರು ಪ್ರಾರ್ಥನೆಗೈದರು, ದೇವರಾಜ್ ವಿಶ್ವಕರ್ಮ ಹಾಗೂ ಮಂಜುನಾಥ್ ಗುಜಮಾಗಡಿ ಕಾರ್ಯಕ್ರಮ ನಿರ್ವಹಿಸಿ ವಂದಿಸಿದರು.

ಮಹಿಳಾ ಮೀಸಲಾತಿ ಜಾರಿಯಾಗುತ್ತದೆ ಅನಿಸುತ್ತಿಲ್ಲ: ಬಸವರಾಜ ಹೊರಟ್ಟಿ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ಮಹಿಳಾ ಮೀಸಲಾತಿ ಜಾರಿಯಾಗುತ್ತದೆ ಎಂದು ನಾನು ಅಂದುಕೊಂಡಿಲ್ಲ. ಈ ಹಿಂದೆಯೂ ಬಹಳ ಪ್ರಯತ್ನ ಮಾಡಿದಾಗಲೂ ಅದು ಆಗಿಲ್ಲ ಎಂದು ವಿಪ ಸಭಾಪತಿ ಬಸವರಾಜ ಹೊರಟ್ಟಿ ವಿಷಾದಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲ ರಾಜಕೀಯ ಪಕ್ಷ ಮಹಿಳಾ ಮೀಸಲಾತಿ ಪರವಾಗಿದ್ದೇವೆ ಎಂದು ತೋರಿಸುತ್ತಾರೆ, ಜಾರಿ ಮಾಡುತ್ತಿಲ್ಲ. ಮಹಿಳೆಯರು 52 ಪರ್ಸೆಂಟೇಜ್ ಇದ್ದಾರೆ. ಅವರು ಸ್ಪರ್ಧೆ ಮಾಡಿ ಒಗ್ಗಟ್ಟಾಗಿ ಗೆದ್ದು ಬರಬಹುದು. ಆದರೆ, ಅವರು ಹಾಗೆ ಮಾಡುತ್ತಿಲ್ಲ. ತಂದೆ, ಮಗ, ಪತಿ ಎಂದು ಅವರಿಗೆ ಬೆಂಬಲ ನೀಡುತ್ತಾರೆ. ಹೀಗಾಗಿ ಅವರಿಗೆ ಗೆಲ್ಲಲು ಆಗುತ್ತಿಲ್ಲ ಎಂದರು.



ರಾಜ್ಯದಲ್ಲಿ ರಾಜಕೀಯ ನೈತಿಕತೆ ಕುಸಿದಿದೆ. ಜನರ ಸಮಸ್ಯೆಗೆ ಸ್ಪಂದಿಸುತ್ತಿಲ್ಲ. ಸದನದಲ್ಲಿಯೂ ಜನರ ಸಮಸ್ಯೆ ಚರ್ಚೆ ಮಾಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸಾರ್ವಜನಿಕರ ಬದುಕಿಗೆ ಸ್ಪಂದಿಸುವುದು ಕಡಿಮೆ ಯಾಗಿದೆ. ವೈಯಕ್ತಿಕ ಸ್ವಾರ್ಥಕ್ಕಾಗಿ, ಕುಟುಂಬಕ್ಕಾಗಿಯೇ ರಾಜಕೀಯ ಮಾಡುತ್ತಿದ್ದಾರೆಯೇ ಹೊರತು ಜನಸೇವೆ ಮಾಡುವ ಬಯಕೆ ಇಲ್ಲ ಎಂದರು.

ಸದನದಲ್ಲಿ ಒಳ್ಳೆಯ ವಿಷಯ ಚರ್ಚೆ ಮಾಡುವುದಿಲ್ಲ, ಹನಿ ಟ್ರ್ಯಾಪ್ ಮೊದಲಾದ ವಿಷಯಗಳನ್ನೇ ಪ್ರಧಾನವಾಗಿ ಚರ್ಚೆ ಮಾಡುತ್ತಾರೆ. ಈ ಬಗ್ಗೆ ಶಾಸಕರಿಗೆ ತರಬೇತಿ ನೀಡಲಾಗಿದೆ. ನಾಯಿ ಬಾಲ ಡೊಂಕು ಎನ್ನುವಂತೆ ಆಗುತ್ತಿದೆ. ಆದರೂ ಈ ಬಾರಿ ಮತ್ತೆ ಎಲ್ಲ ಶಾಸಕರಿಗೂ ತರಬೇತಿ ನೀಡುವುದಾಗಿ ಹೇಳಿದರು.

ಉತ್ತರ ಕರ್ನಾಟಕದ ಬಗ್ಗೆ ನಾನು ಚರ್ಚೆ ಮಾಡಿಲ್ಲ ಎಂದರೆ ಒಪ್ಪುವುದಿಲ್ಲ. ಮಂಗಳವಾರ ಮತ್ತು ಬುಧವಾರ ಕಲ್ಯಾಣ ಕರ್ನಾಟಕ ಮತ್ತು ಕಿತ್ತೂರ ಕರ್ನಾಟಕ ಬಗ್ಗೆಯೇ ಚರ್ಚೆಗೆ ವಿಧಾನಪರಿಷತ್‌ನಲ್ಲಿ ಅವಕಾಶ ನೀಡಲಾಗುತ್ತದೆ ಎಂದರು.

- ಸಾರ್ವಜನಿಕರ ಬದುಕಿಗೆ ಸ್ಪಂದಿಸುವುದು ಕಡಿಮೆ ಯಾಗಿದೆ. ವೈಯಕ್ತಿಕ ಸ್ವಾರ್ಥಕ್ಕಾಗಿ, ಕುಟುಂಬ ಕ್ಕಾಗಿಯೇ ರಾಜಕೀಯ ಮಾಡುತ್ತಿದ್ದಾರೆಯೇ ಹೊರತು ಜನಸೇವೆ ಮಾಡುವ ಬಯಕೆ ಇಲ್ಲ
- ಸದನದಲ್ಲಿ ಒಳ್ಳೆಯ ವಿಷಯ ಚರ್ಚೆ ಮಾಡುವುದಿಲ್ಲ, ಹನಿ ಟ್ರ್ಯಾಪ್ ಮೊದಲಾದ ವಿಷಯಗಳನ್ನೇ ಪ್ರಧಾನವಾಗಿ ಚರ್ಚೆ ಮಾಡುತ್ತಾರೆ.

ಆರೈಕೆ... ಹೆತ್ತು ಬೀದಿಗೆ ಎಸೆದ ಹಡೆದವ್ವ, ಹಾಲುಣಿಸಿ ಲಾಲಿ ಹಾಡಿ ಆರೈಕೆ ಮಾಡಿದ ಗ್ರಾಮಸ್ಥರು

ಅನಾಥ ಕಂದಮ್ಮಗೆ ಗ್ರಾಮಸ್ಥರ ಜೋಗುಳ

• **ಅಮರೇಶ್ವರಸ್ವಾಮಿ ಕಂದಗಲ್ಲಮಠ**
ಕನ್ನಡಪ್ರಭ ವಾರ್ತೆ ಕುಕನೂರು

ಆ, ಆ ಅಮ್ಮಾ, ಅಮ್ಮಾ ಎಂದು ಕರುಳು ಕಿತ್ತು ಬರುವಂತೆ ಹಸಿವಿನ ಆಕ್ರಂದನದಿಂದ ಕಿರುಚುತ್ತಿದ್ದ ಹಸುಗೂಸಿನ ಕೂಗು ಕೇಳಿ ನೆರೆದಿದ್ದ ಮಹಿಳೆಯರ ತಾಯ್ತನ ಜಾಗ್ರತವಾಯಿತು. ಓಡಿ ಬಂದು ಹಸುಗೂಸು ಎತ್ತಿಕೊಂಡು ಹಾಲುಣಿಸಿ ಜೋಗುಳ ಹಾಡಿದಾಗ ಉಳಿದವರ ಕಣ್ಣಂಚಲ್ಲಿ ನೀರು ಕಾಣಿಸಿತ್ತು!

ಆಗ ತಾನೆ ಹುಟ್ಟಿ ಮಗುವನ್ನೂ ಹೆತ್ತವಳು ಬಿಸಾಡಿ ಹೋಗಿದ್ದಾಳೆ. ತಾಲೂಕಿನ ದ್ಯಾಂಪುರು ಗ್ರಾಮದ ಸರ್ಕಾರಿ ಶಾಲೆ ಅಂಗಳದಲ್ಲಿ ದಾರಿ ಹೋಕರಿಗೆ ಕೇಳಿದ್ದು ಹಸೂಗೂಸಿನ ಹಸಿವಿನ ಆಕ್ರಂದನ. ತಾಯಿ ಎದೆಹಾಲು ಕುಡಿದು ಹಾಯಾಗಿ ಮಲಗಬೇಕಿದ್ದ ಹಸುಗೂಸು ಬೀದಿಯಲ್ಲಿ ನರಳುತ್ತಿತ್ತು. ಮಗುವಿನ ಮುಖವನ್ನಾದರೂ ಹಡೆದಾಕೆ ನೋಡಿದ್ದಾಳೊ ಇಲ್ಲವೋ, ಹುಟ್ಟಿದ ತಕ್ಷಣ ಮಗುವೇ ಆಕೆಗೆ ಬೇಡವಾಯಿತೇ? ಎಷ್ಟು ಚಂದೈತಿ, ಏನ್ ಪಾಪ್ ಮಾಡೆತ್ತಿದು ಎಂದುಕೊಂಡ ತಾಯಂದಿರು ಸೆರಗ ತುದಿಯಿಂದ ಕಣ್ಣು ಒರೆಸಿಕೊಂಡರು.

ಮಗುವಿನ ಹೆತ್ತ ಕರುಳಿಗೆ ಹಿಡಿಶಾಪ ಹಾಕುತ್ತಾ ಅಲ್ಲೆ ಮನೆಯೊಂದರ ಬಳಿ ತೆಗೆದುಕೊಂಡು ಹೋಗಿ, ರಕ್ತದ ಮಡುವಿನಲ್ಲಿದ್ದ ಗಂಡು ಮಗುವಿಗೆ ಬಿಸಿ ನೀರು ಹಾಕಿ ರಕ್ತ ತೊಳೆದು, ಕೊಬ್ಬರಿ ಎಣ್ಣೆ ಹಚ್ಚಿ ಸ್ನಾನ ಮಾಡಿಸಿದರು. ಇನ್ನಷ್ಟು ಹಾಲುಣಿಸಿ ಸ್ವಂತ ಮಗುವಂತೆ ಲಾಲಿ ಹಾಡಿ, ಎತ್ತಿಕೊಂಡು ಮುದ್ದಾಡಿದರು. ಹಡದವ್ವನ ಕಾಣದ ಮಗು ಗ್ರಾಮಸ್ಥರ ತೆಕ್ಕೆಯಲ್ಲಿ ನಿದ್ದೆಗೆ ಜಾರಿತು. ಅಲ್ಲಿಯೇ ಇದ್ದ ಆರೋಗ್ಯ ಸಹಾಯಕ ಕಾಳಪ್ಪ ಕುಂಬಾರ ಸಹ ಮಗುವನ್ನು ಆರೈಕೆ ಮಾಡಿ ವೈದ್ಯಾಧಿಕಾರಿಗಳಿಗೆ, ಮಕ್ಕಳ ಇಲಾಖೆಗೆ ತಿಳಿಸಿ ಮುಂದಿನ ಕಾನೂನು ಸುರಕ್ಷಾ ಕ್ರಮ ತೆಗೆದುಕೊಂಡು ಕೊಪ್ಪಳ ಜಿಲ್ಲಾಸ್ಪತ್ರೆಗೆ ಒಪ್ಪಿಸಿ ಬಂದರು.

ಬೇಡವಾದ ಕೂಸು ನಮಗಿರಲಿ: ಈ ಕೂಸು ಎಷ್ಟು ಚಂದೈತೀ, ಅದನ್ನು ನಾನೇ ಜೋಪಾನ್ ಮಾಡ್ತೀನ್ರೀ, ಅದನ್ನ ನನಗ ಕೊಟ್ಟು ಬಿಡ್ರೀ ಎಂದು ಅಲ್ಲಿದ್ದ ಮೂರ್ನಾಲ್ಕು ಮಂದಿ ಕಂದಮ್ಮನ ಜೋಪಾನ ಮಾಡಲು ಮುಂದ ಬಂದರು. ಕರುಣೆ ಇಲ್ಲದೇ ಬೀದಿಯಲ್ಲಿ ಬಿಸಾಡಿದ ಆ ತಾಯಿ ತಾಯಿಯೇ ಅಲ್ಲ, ಆಕೆಗೆ ಬಿಸಾಡುವ ಕಲ್ಲಾದರೂ ಹೇಗೆ ಬಂತು? ಇಂತ ಕ್ರೂರತನ ತಾಯಿಗೆ ಯಾಕೆ ಬಂತು? ಸಮಾಜ ಅಳುಕಿಗೆ ಅಂಜಿದಳೆ? ಎಂಬ ಪ್ರಶ್ನೆ ಸ್ಥಳೀಯರಿಂದ ಕೇಳಿಬಂದವು. ನಮಗ್ ಕೊಟ್ಟು ಬೀಡ್ರೀ, ನಾವ್ ಜೋಪಾನ್ ಮಾಡ್ತೀವಿ ಎಂದು ಮಕ್ಕಳಿಲ್ಲದ ವ್ಯಕ್ತಿ ಗೋಗರೆದರು. ಇನ್ನೊಬ್ಬ ತಾಯಿ ನಾನೇ ಜೋಪಾನ್ ಮಾಡ್ತೀನಿ ಬಿಡ್ರೀ ಎಂದು ಆಸೆಪಟ್ಟು ಕೇಳಿದಳು.



ಅನಾಥ ಕಂದಮ್ಮನನ್ನು ಎತ್ತಿಕೊಂಡು ಮುದ್ದಾಡಿದ ತಾಯ್ತನ ಕರುಳಿನ ಸ್ಥಳೀಯ ಮಹಿಳೆ.

> ಮಗು ಅಳೋದು ಕೇಳಿ ನಮ್ ಕರುಳ್ ಚುರುಕ್ ಅಂದ್ವರೀ, ಇಂಥ ಮಗು ಎಸೆದ ಹೋಗಾಕ್ಕಾದ್ರೂ ಮನಸ್ ಹೇಂಗ್ ಬಂತೋ ಆ ಮಹಾತಾಯಿಗೆ. ನಾವ್ ಹಾಲುಣಿಸಿ, ಸ್ನಾನ ಮಾಡಿಸಿದ್ವಿ, ಇಲ್ಲೇ ಜೋಪಾನ್ ಮಾಡಾಕ್ ಬಾಳ್ ಮಂದಿ ಕೇಳಿದ್ರೂ, ಕಾನೂನಾತ್ಮಕವಾಗಿ ಕೊಡಾಕ್ ಬರಲ್ಲಂದ್ರು. ಕೊಟ್ಟಿದ್ರ ನಾವಾ ಜೋಪಾನ್ ಮಾಡ್ತೀದ್ವಿ.
> • **ಇಂದ್ರಮ್ಮ ಹಿರೇಮಠ, ಲಕ್ಷ್ಮಮ್ಮ, ರಾಧಾ ಹಡಪದ,** ದ್ಯಾಂಪೂರ ಗ್ರಾಮಸ್ಥರು

> ಬೀದಿಯಲ್ಲಿ ಬಿದ್ದ ಮಗುವನ್ನು ಸ್ಥಳೀಯರು ಆರೈಕೆ ಮಾಡಿರುವುದು ನಿಜಕ್ಕೂ ಮಾನವೀಯ ಸಂಗತಿ. ಮಗು ಬೇಡವಾದರೆ ಎಲ್ಲಿ ಬೇಕಂದಲ್ಲಿ ಬಿಸಾಡಬಾರದು. ಅದಕ್ಕಾಗಿ ಕೊಪ್ಪಳದಲ್ಲೊ ತೊಟ್ಟಿಲು ಮನೆ ಇದೆ. ಅಲ್ಲಿ ಕೂಸು ಇಟ್ಟು ಬಂದರೆ ಇಲಾಖೆಯಿಂದ ಆರೈಕೆ ಕಾರ್ಯ ಜರುಗುತ್ತದೆ. ಕೂಸು ಎಲ್ಲೆಂದರಲ್ಲಿ ಬಿಟ್ಟು ಹೋಗುವುದು ತಪ್ಪು. ಈ ರೀತಿ ಘಟನೆ ಜರುಗಬಾರದು.
> • **ಬೆಟದಪ್ಪ ಮಾಳೆಕೊಪ್ಪ,** ಸಿಡಿಪಿಒ ಯಲಬುರ್ಗಾ

ಜಿಲ್ಲಾಸ್ಪತ್ರೆಗೆ ದಾಖಲು

ಕುಕನೂರು: ತಾಲೂಕಿನ ದ್ಯಾಂಪೂರ ಗ್ರಾಮದ ಸರ್ಕಾರಿ ಶಾಲೆ ಬಳಿ ಸಿಕ್ಕ ಅನಾಥ ಮಗುವನ್ನು ಸ್ಥಳೀಯ ಆಸ್ಪತ್ರೆ ಯವರು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ದಾಖಲಿಸಿ ಆರೈಕೆಗಾಗಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ದಾಖಲಿಸಲಾಗಿದೆ.

ನವಜಾತ ಶಿಶು ಹೆರಿಗೆ ಆನಂತರ ಯಾರೋ ತಂದು ಬಿಟ್ಟು ಹೋಗಿದ್ದು, ಕುಕನೂರು ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ರಾಮಕೃಷ್ಣರೆಡ್ಡಿ ಮಗುವನ್ನು ಆ್ಯಂಬುಲೆನ್ಸ್ ಜತೆಗೆ ಸಿಬ್ಬಂದಿ ಕಳುಹಿಸಿ ಮಗುವನ್ನು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ದಾಖಲಿಸಿ, ಹೆಚ್ಚಿನ ಆರೈಕೆಗಾಗಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ದಾಖಲಿಸಿದರು. ಆರೋಗ್ಯ ಇಲಾಖೆ ಹಿರಿಯ ಆರೋಗ್ಯ ಸಹಾಯಕ ಕಾಳಪ್ಪ ಕುಂಬಾರ, ಸಿಬ್ಬಂದಿ ಕೃಷ್ಣರಾವ್ ದೇಶಪಾಂಡೆ, ಸಿದ್ದಪ್ಪ, ಶರಣಮ್ಮ, ವಿಜಯಲಕ್ಷ್ಮೀ, ರಾಧಾ ಇದ್ದರು.

ಎಸ್ಸೆಸ್ಸೆಲ್ಸಿ: ಐಸಿಎಸ್‌ಇ ಶೇ.100 ಫಲಿತಾಂಶ

• **ಕನ್ನಡಪ್ರಭ ವಾರ್ತೆ** ಕೊಪ್ಪಳ

ನಗರದ ಎಸ್‌ಎಫ್‌ಎಸ್‌ಐಸಿಎಸ್‌ಇ ಶಾಲೆ 2025-26ನೇ ಸಾಲಿನ 10ನೇ ತರಗತಿಯ ಫಲಿತಾಂಶದಲ್ಲಿ ಸತತ 13ನೇ ಬಾರಿಗೆ ಶೇ. 100 ಕ್ಕೆ ನೂರರಷ್ಟು ಫಲಿತಾಂಶ ದಾಖಲಿಸಿದ್ದಾರೆ. ಪರೀಕ್ಷೆಗೆ ಹಾಜರಾದ 72 ವಿದ್ಯಾರ್ಥಿಗಳ ಪೈಕಿ 20 ವಿದ್ಯಾರ್ಥಿಗಳು ಶೇ.90 ಕ್ಕಿಂತಲೂ ಹೆಚ್ಚು ಅಂಕಗಳೊಂದಿಗೆ ಉತ್ತೀರ್ಣರಾಗಿದ್ದಾರೆ. 66 ವಿದ್ಯಾರ್ಥಿಗಳು ಅತ್ಯುನ್ನತ ದರ್ಜೆ, ಪ್ರಥಮ ದರ್ಜೆಯಲ್ಲಿ 06 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಸೃಷ್ಟಿ ಬಿ ಸಾಲಿ ಶೇ. 99.0% ಅತೀ ಹೆಚ್ಚು ಅಂಕಗಳೊಂದಿಗೆ ಕೊಪ್ಪಳ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾಳೆ. ಸುಪ್ರಿಯಾ ಪ್ರಕಾಶ ಶೇ. 98.8% ಅಂಕಗಳೊಂದಿಗೆ ದ್ವಿತಿಯ ಹಾಗೂ ಆದಿತ್ಯಸ್ಕಂದ ಶೇ. 97.8% ಅಂಕಗಳೊಂದಿಗೆ ಶಾಲೆಗೆ ತೃತೀಯ ಸ್ಥಾನದೊಂದಿಗೆ





ಉತ್ತೀರ್ಣರಾಗಿದ್ದಾರೆ. ಶ್ರೇಷ್ಠ ಸಾಧನೆಗೈಯುವ ಮೂಲಕ ಶಾಲೆಗೆ ಹೆಮ್ಮೆ ತಂದಿರುವ ಎಲ್ಲ ವಿದ್ಯಾರ್ಥಿಗಳಿಗೆ, ಮಾರ್ಗದರ್ಶನ ನೀಡಿದ ಶಿಕ್ಷಕ ಸಿಬ್ಬಂದಿ ವರ್ಗಕ್ಕೆ ಹಾಗೂ ಅತ್ಯುತ್ತಮ ಸಹಕಾರ ನೀಡಿದ ಶಾಲೆಯ ಎಲ್ಲ ಪಾಲಕರಿಗೆ ಶಾಲೆಯ ಪ್ರಾಂಶುಪಾಲ ಫಾದರ್ ಜಬಮಲ್ಲೈ ಹಾಗೂ ಫಾ.ಮ್ಯಾಥ್ಯು ಮಾಮ್ಲಾ ಶಾಲಾ ಆಡಳಿತ ಮಂಡಳಿ ಪ್ರಶಂಸೆ ಸಲ್ಲಿಸಿದ್ದಾರೆ.

ಜೀವನ ಮಹತ್ವದ ನಿರ್ಧಾರ ಎಚ್ಚರಿಕೆಯಿಂದ ತೆಗೆದುಕೊಳ್ಳಿ

• **ಕನ್ನಡಪ್ರಭ ವಾರ್ತೆ** ಹನುಮಸಾಗರ

ಯುವಜನತೆ ಹಾಗೂ ಯುವತಿಯರು ತಮ್ಮ ಜೀವನದ ಮಹತ್ವದ ನಿರ್ಧಾರ ಸೂಕ್ತವಾಗಿ ತೆಗೆದುಕೊಳ್ಳಬೇಕು ಎಂದು ಉಪನ್ಯಾಸಕ ಹನಮಂತಸಾ ನಿರಂಜನ ಹೇಳಿದರು.

ಪಟ್ಟಣದ ಅಂಬಾಭವಾನಿ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ಭಾನುವಾರ ಯುವಜನರಲ್ಲಿ ಸಂಸ್ಕಾರ, ಜವಾಬ್ದಾರಿ ಹಾಗೂ ಸಾಮಾಜಿಕ ಜಾಗೃತಿ ಬೆಳೆಸುವ ಉದ್ದೇಶದಿಂದ ಎಸ್.ಎಸ್.ಕೆ. ಸಮಾಜ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಜಾಗೃತವೇ ನಮ್ಮ ಸಮಾಜದ ರಕ್ಷಣೆ ವಿಚಾರ ಸಂಕೀರ್ಣದಲ್ಲಿ ಮಾತನಾಡಿದರು.

ಪಾಲಕರು ನಿಮ್ಮ ಹೆಣ್ಣು ಮಕ್ಕಳಿಗೆ ಉಡುಗೆ ತೋಡುಗೆಗಳು ಸರಿಯಾದ ರೀತಿಯಲ್ಲಿ ಹಾಕಿಕೊಳ್ಳಲು ಹೇಳಿ, ಸಮಾಜದ ಏಕತೆ ಮತ್ತು ಸಂಪ್ರದಾಯಗಳ ಮಹತ್ವ ವಿವರಿಸಿದರು.

ಸರಳಾಬಾಯಿ ಭಾಂಡಗೆ ಮಾತನಾಡಿ, ಸಮಾಜದಲ್ಲಿ ಯುವಕ-ಯುವತಿಯರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಕುಟುಂಬದ ಮೂಲ ಮೌಲ್ಯ ಉಳಿಸಲು ಪಾಲಕರೂ ಸಮಾನ ಜವಾಬ್ದಾರಿ ಹೊತ್ತಿರಬೇಕು, ಉತ್ತಮ ಸಂಸ್ಕಾರ ಮತ್ತು ಶಿಸ್ತಿನ ಮೂಲಕವೇ ಸಮುದಾಯದ ಪ್ರಗತಿ ಸಾಧ್ಯವೆಂದು ಅಭಿಪ್ರಾಯಪಟ್ಟರು.

ಬಾಬು ಬಾಕಳೆ ಯುವಜನತೆಗೆ ಜಾಗೃತಿ ನುಡಿ ನೀಡಿ, ಸ್ವಾವಲಂಬನೆ, ಶಿಸ್ತು ಮತ್ತು ಸಂಘಟಿತ ಶಕ್ತಿ ಸಮಾಜದ ಅಭಿವೃದ್ಧಿಗೆ ಅವಶ್ಯಕ. ಯುವಕರು ತಮ್ಮ ಜೀವನದಲ್ಲಿ ಗುರಿ ಹೊಂದಿ ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಭಗೀರಥಸಾ ಪಾಟೀಲ ಮಾತನಾಡಿ, ಸಮಾಜದ ಬಾಂಧವರು ವೈಯಕ್ತಿಕ ಭಿನ್ನಾಭಿಪ್ರಾಯ ಮರೆತು ಒಗ್ಗಟ್ಟಿನಿಂದ ಸಾಗಿದಾಗ ಮಾತ್ರ ಸಮುದಾಯದ ಅಭಿವೃದ್ಧಿ ಸಾಧ್ಯವೆಂದು ತಿಳಿಸಿದರು.

ಉಪಾಧ್ಯಕ್ಷ ವಿಠಲಸಾ ಶಿಂಗ್ರಿ, ಸುರೇಶ ರಾಯಬಾಗಿ, ಮಾರುತಿಸಾ ರಂಗ್ರೇಜ, ಸರಳಾಬಾಯಿ ಭಾಂಡಗೆ, ಡಿ.ಸಿ. ಬಾಕಳೆ, ಬಾಬು ಬಾಕಳೆ, ಸರೋಜಾಬಾಯಿ ಶಿಂಗ್ರಿ, ರವಿಂದ್ರಸಾ ಬಾಕಳೆ, ಎಲ್ಲೂಸಾ ಬಾಕಳೆ, ರಾಜು ಮಿಸ್ಕೀನ್, ಭೀಮಸಾ ದೇವಳೆ, ಹನುಂತಸಾ ರಾಯಬಾಗಿ ಮಹಿಳಾ ಮಂಡಳ ಹಾಗೂ ಯುವಕ ಮಂಡಳ ಸದಸ್ಯರು ಇತರರು ಇದ್ದರು.